ಸಂಪುಟ : 10 ಸಂಚಿಕೆ: 198 ಪುಟ : 4+2 ಬೆಲೆ: 3.00 ರವಿವಾರ ಸೆಪ್ಟೆಂಬರ್ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 10 Issue : 198 Pages : 4+2 Price : 3.00 Sunday September 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**CHANGE OF NAME**

I, **Smt. Rajalaxmi W/o Shashikumar Bukkanatti**, Occ: Housewife, R/o Dasar Oni, Behind PWD Office, Mulagund Naka, Gadag, Tq:/Dist: Gadag, State: Karnataka, have changed my name from **RAJALAXMI D/o SURESH WALIKAR (Old Name)** to **Smt. RAJALAXMI W/O SHASHIKUMAR BUKKANATTI (New Name)** for all future transactions. Produced an affidavit dtd. 12.09.2025 through Notary K.P. Kotigoudar, Gadag.

### 50% ರಷ್ಟು ಟ್ರಾಫಿಕ್ ಫೈನ್ ಆಫರ್ ಮುಕ್ತಾಯ: 22 ದಿನಗಳಲ್ಲಿ 106 ಕೋಟಿ ದಂಡ ಸಂಗ್ರಹ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಟ್ರಾಫಿಕ್ ಫೈನ್ 50% ಡಿಸ್ಕೌಂಟ್‌ಗೆ ವಾಹನ ಸವಾರರಿಂದ ಭರ್ಜರಿ ರೆಸ್ಪಾನ್ಸ್ ಸಿಕ್ಕಿದ್ದು, ಇದುವರೆಗೂ ಬರೋಬ್ಬರಿ 106 ಕೋಟಿ ದಂಡ ಸಂಗ್ರಹವಾಗಿದೆ.

ಈ ಮೂಲಕ 37,86,173 ಬಾಕಿ ಸಂಚಾರ ನಿಯಮ ಉಲ್ಲಂಘನೆ ಕೇಸ್‌ಗಳು ಇತ್ಯರ್ಥಗೊಂಡಿವೆ. ಆ.23 ರಿಂದ ಸೆ.12 ರ ವರೆಗೆ ಬಾಕಿ ದಂಡ ಕಟ್ಟಲು 50% ಆಫರ್ ನೀಡಲಾಗಿತ್ತು. ಆನ್‌ಲೈನ್ ಹಾಗೂ ಆಫ್‌ಲೈನ್ ನಲ್ಲಿ ವಾಹನ ಸವಾರರು ಬಾಕಿ ದಂಡ ಪಾವತಿ ಮಾಡಿದ್ದಾರೆ.

**ಸಿಸಿ ರಸ್ತೆ ಸುಧಾರಣಾ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ**

# ಪಟ್ಟಣದ ಸಮಗ್ರ ಅಭಿವೃದ್ಧಿಗೆ ಸಹಕರಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಸಿದ್ಧಾರೂಢ ಮಠದಿಂದ ಪಿಎಲ್‌ಡಿ ಬ್ಯಾಂಕ್‌ವರೆಗೆ ಹಾಗೂ ಗದಗ ರಸ್ತೆಯ ಎಂಆರ್‌ಬಿಸಿ ಕಾಲುವೇಯಿಂದ ಹೊಳೆಆಲೂರ ಕ್ರಾಸ್‌ವರೆಗೆ ಸಿಸಿ ರಸ್ತೆಯ ನಿರ್ಮಾಣ ಹಾಗೂ ಆಕರ್ಷಕ ದೀಪಗಳ ಅಳವಡಿಕೆ, ಫುಟ್‌ಪಾತ್ ನಿರ್ಮಾಣ ಸೇರಿ ಪಾದಚಾರಿಗಳ ಸುರಕ್ಷತೆ ದೃಷ್ಟಿಯಿಂದ ಗ್ರಿಲ್ ಅಳವಡಿಕೆ ಕಾರ್ಯಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ. ಇಂದಿನಿಂದಲೇ ಕಾಮಗಾರಿಗಳು ಆರಂಭಗೊಳ್ಳಲಿವೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.



ಅವರು ಶನಿವಾರ 1 ಕೋಟಿ 75 ಲಕ್ಷ ರೂ ವೆಚ್ಚದಲ್ಲಿ ಸಿದ್ಧಾರೂಢ ಮಠದಿಂದ ಪಿಎಲ್‌ಡಿ ಬ್ಯಾಂಕ್‌ವರೆಗೆ ಮತ್ತು 2 ಕೋಟಿ ರೂಗಳ ವೆಚ್ಚದ ಎಂಆರ್‌ಬಿಸಿ ಕಾಲುವೇಯಿಂದ ಮುಲ್ಲಾನಭಾವಿ ಕ್ರಾಸ್‌ವರೆಗೆ ಸಿಸಿ ರಸ್ತೆ ಸುಧಾರಣಾ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ತಾಲೂಕಿನ ರೈತರ ಹಿತದೃಷ್ಟಿಯಿಂದ 6 ಕೋಟಿ ರೂ ವೆಚ್ಚದಲ್ಲಿ 1500 ಟನ್ ಸಾಮರ್ಥ್ಯದ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಮುಂದಾಗಿದ್ದು, ಕಾಮಗಾರಿ ಶೀಘ್ರ ಆರಂಭಗೊಳ್ಳಲಿದೆ. 20 ಕೋಟಿ ರೂಗಳ ವೆಚ್ಚದ ರಸ್ತೆ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದ್ದು, ಪಾದಚಾರಿಗಳ ಸುರಕ್ಷತಾ ದೃಷ್ಟಿಯಿಂದ ಗ್ರಿಲ್ ಅಳವಡಿಕೆ ಕಾಮಗಾರಿಯನ್ನು ಹೊಸದಾಗಿ ಅಳವಡಸಿಕೊಂಡಿದೆ. ಪಟ್ಟಣದ 23 ವಾರ್ಡ್‌ಗಳ ಅಭಿವೃದ್ಧಿಗೆ 4 ಕೋಟಿ 87 ಲಕ್ಷ ರೂಗಳನ್ನು ಒದಗಿಸಲಾಗಿದೆ ಎಂದರು.

ಜಿಗಳೂರ ಕೆರೆಯಿಂದ ರೋಣ ನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡಲು 20 ಕೋಟಿ ರೂ ಅನುದಾನದಲ್ಲಿ ಕಾಮಗಾರಿ ನಡೆದಿದೆ. ಈ ಯೋಜನೆಯಿಂದ ಪಟ್ಟಣದಲ್ಲಿನ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯಲಿದೆ. ಅಲ್ಲದೆ 75 ಲಕ್ಷ ರೂಗಳ ವೆಚ್ಚದಲ್ಲಿ ಉದ್ಯಾನವನ ನಿರ್ಮಿಸಲಾಗುತ್ತಿದೆ. ನವಲಗುಂದದಿಂದ ಕಾತ್ರಾಳ್ ಕ್ರಾಸ್‌ವರೆಗಿನ ಹೈವೆ ಸಹ ನಿರ್ಮಾಣವಾಗಲಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಗ್ಯಾರಂಟಿ ಸಮಿತಿ ಅದ್ಯಕ್ಷ ಸಂಗನಗೌಡ ಪಾಟೀಲ, ಪುರಸಭೆ ಅಧ್ಯಕ್ಷೆ ಬಸ್ಸಮ್ಮ ಕೊಪ್ಪದ, ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ವೀರಣ್ಣ ಶೆಟ್ಟರ, ವಿ.ಆರ್. ಗುಡಿಸಾಗರ, ದಶರಥ ಗಾಣಿಗೇರ, ಮುತ್ತಣ್ಣ ಸಂಗಳದ, ಯೂಸುಪ್ ಇಟಗಿ, ಬಾವಾಸಾಬ ಬೇಟಗೇರಿ, ಪರಶುರಾಮ ಅಳಗವಾಡಿ, ಎಚ್.ಎಸ್. ಸೋಂಪುರ, ಚೆನ್ನಪ್ಪಗೌಡ್ರ ರಾಯನಗೌಡ್ರ, ಆನಂದ ಚಂಗಳಿ, ಪ್ರಕಾಶ ಹಾಲಣ್ಣವರ, ಸಂಗು ನವಲಗುಂದ, ಸಂಜಯ ದೊಡ್ಡಮನಿ, ಅಸ್ಲಂ ಕೊಪ್ಪಳ ಸೇರಿದಂತೆ ಪುರಸಭೆಯ ಸದಸ್ಯರು ಹಾಗೂ ಮುಖಂಡರು ಉಪಸ್ಥಿತರಿದ್ದರು.

> ಪಟ್ಟಣದ ಮಧ್ಯ ಭಾಗದಲ್ಲಿರುವ ಕೆರೆ ಅಭಿವೃದ್ಧಿಪಡಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿದ್ದು, ವಾಯುವಿಹಾರಕ್ಕೆ ಅನುಕೂಲವಾಗುವ ದೃಷ್ಟಿಯಿಂದ ಸುಸಜ್ಜಿತ ರಸ್ತೆ ನಿರ್ಮಾಣ, ಆಸನಗಳ ವ್ಯವಸ್ಥೆ, ಉದ್ಯಾನವನ ನಿರ್ಮಾಣ ಕಾರ್ಯಕ್ಕೆ ಒತ್ತು ನೀಡಲಾಗಿದೆ. ಮುಖ್ಯವಾಗಿ ಕೆರೆಯನ್ನು ತುಂಬಿಸುವ ಮೂಲಕ ಬೋಟಿಂಗ್ ವ್ಯವಸ್ಥೆಯನ್ನು ಕಾಮಗಾರಿಯಲ್ಲಿ ಅಳವಡಿಸಿಕೊಂಡಿದ್ದು, 40 ಲಕ್ಷ ರೂಗಳ ವೆಚ್ಚದಲ್ಲಿ ಹೈಟೆಕ್ ಶೌಚಾಲಯಗಳನ್ನು ನಿರ್ಮಿಸಲಾಗುತ್ತಿದೆ. ಪಟ್ಟಣದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

**ಕಾಮಗಾರಿ, ಕಾರ್ಯಕ್ರಮಗಳಲ್ಲಿ ಪಾರದರ್ಶಕತೆ, ಗುಣಮಟ್ಟ ಕಾಪಾಡಿ; ಕೇಂದ್ರ ಸಚಿವ ಪ್ರಲ್ಹಾದ ಜೋಶಿ**

# ಕಾಮಗಾರಿಗಳ ಅನುಷ್ಠಾನದಲ್ಲಿ ನಿಯಮ ಮೀರದಿರಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೇಂದ್ರ ಸರ್ಕಾರವು ಮಂತ್ರಾಲಯಗಳ ಅಡಿಯಲ್ಲಿ ರಾಜ್ಯದ ಅಭಿವೃದ್ಧಿಗಾಗಿ ವಿವಿಧ ಕಾಮಗಾರಿ ಮತ್ತು ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆ ಮಾಡುತ್ತದೆ. ಇದರಲ್ಲಿ ಪಾರದರ್ಶಕತೆ ಮತ್ತು ಗುಣಮಟ್ಟವನ್ನು ಕಾಪಾಡಬೇಕು ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ಅವರು ಶನಿವಾರ ಸಂಜೆ ಧಾರವಾಡ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ-ದಿಶಾ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.


ಎಲ್ಲ ಇಲಾಖೆಗಳು ಕೇಂದ್ರ ಸರ್ಕಾರದ ಯೋಜನೆಗಳ ಪ್ರಗತಿ ಮತ್ತು ಅನುದಾನ ಬಳಕೆಯ ಬಗ್ಗೆ ನಿಯಮಿತವಾಗಿ ಸಂಸದರ ಕಚೇರಿಗೆ ವರದಿ ಸಲ್ಲಿಸಬೇಕು. ಕಾಮಗಾರಿಗಳ ಅನುಷ್ಠಾನ ಮತ್ತು ಫಲಾನುಭವಿಗಳ ಆಯ್ಕೆಯಲ್ಲಿ ಯಾವುದೇ ರೀತಿಯ ಗೊಂದಲ ಅಥವಾ ನಿಯಮ ಮೀರಿ ಮಾಡಬಾರದು ಎಂದು ಸಚಿವರು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಹಾಗೂ ಶಾಸಕರಾದ ಅರವಿಂದ ಬೆಲ್ಲದ, ಶಾಸಕರಾದ ಎಮ್.ಆರ್. ಪಾಟೀಲ, ಮಹೇಶ ಟೆಂಗಿನಕಾಯಿ, ಮಹಾಪೌರರಾದ ಜ್ಯೋತಿ ಪಾಟೀಲ ಮತ್ತು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ಮಾತನಾಡಿದರು. ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಕಾರ್ಯಕ್ರಮ ನಿರೂಪಿಸಿ, ಸಭೆ ನಿರ್ವಹಿಸಿದರು. ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಸ್ವಾಗತಿಸಿ, ವಂದಿಸಿದರು. ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪಪೊಲೀಸ್ ಆಯುಕ್ತ ಮಹಾನಿಂಗ ನಂದಗಾವಿ, ಪ್ರೊಬೆಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ ಇದ್ದರು.

ದಿಶಾ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಯಲ್ಲಮ್ಮ ಗಾಣಿಗೇರ, ಮೌನೇಶ ಬಡಿಗೇರ, ಗುರುನಾಥ ಬಸವನಗೌಡರ, ಸಿದ್ದಪ್ಪ ಬಿದರಳ್ಳಿ, ಹನುಮಂತಪ್ಪ ಬೂದಿಹಾಳ ಅವರು ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಕುರಿತು ಪರಿಶೀಲನಾ ವರದಿಯನ್ನು ಸಭೆಯಲ್ಲಿ ಸಲ್ಲಿಸಿದರು. ಸಭೆಯಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕಾಶಿನಾಥ ಭದ್ರಣವರ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಪಶುವೈದ್ಯಕೀಯ ಇಲಾಖೆಯ ಉಪನಿರ್ದೇಶಕ ಡಾ. ಸಂತಿ, ಪಂಚಾಯತ ರಾಜ್ ಇಂಜಿನಿಯರಿಂಗ್ ಇಲಾಖೆಯ ಕಾರ್ಯಪಾಲಕ ಅಭಿಯಂತರ ಆರ್.ಎನ್. ಸೊಪ್ಪಿಮಠ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್. ಎಸ್. ಕೆಳದಿಮಠ, ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಎಸ್.ಎಮ್. ಹೊನಕೇರಿ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಕಾರ್ಯಕ್ರಮ ಅಧಿಕಾರಿ ಕಮಲಾ ಬೈಲೂರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

> ಕೃಷಿ ಇಲಾಖೆಯಿಂದ ಮುಂಗಾರು ಮಳೆ ಹಾನಿ ಕುರಿತು ನಡೆಸಿರುವ ಸಮೀಕ್ಷೆಯಿಂದ ಅಳ್ನಾವರ, ಕಲಘಟಗಿ ಭಾಗದ ಬೆಳೆಗಳಾದ ಗೋವಿನಜೋಳ, ಸೋಯಾಬಿನ್ ಬೆಳೆಗಳನ್ನು ಬಿಟ್ಟಿರುವುದಾಗಿ ರೈತರು ಮನವಿ ಸಲ್ಲಿಸಿದ್ದಾರೆ. ಈ ಕುರಿತು ಇನ್ನೊಮ್ಮೆ ಕೃಷಿ ಇಲಾಖೆಯ ಅಧಿಕಾರಿಗಳು ಪರಿಶೀಲಿಸಬೇಕು. ಹೆಸರು ಬೆಳೆಹಾನಿ ಕುರಿತು ಸರಿಯಾದ ವರದಿ ನೀಡಿ, ಅರ್ಹ ರೈತರಿಗೆ ಪೂರ್ಣ ಪ್ರಮಾಣದ ವಿಮೆ ಸೌಲಭ್ಯ ದೊರಕುವಂತೆ ಅಧಿಕಾರಿಗಳು ಕ್ರಮವಹಿಸಿ, ಸಮೀಕ್ಷಾ ವರದಿ ನೀಡಬೇಕೆಂದು ಸಚಿವರು ನಿರ್ದೇಶಿಸಿದರು.

# ಡಿಜಿಟಲ್ ಗ್ರಂಥಾಲಯ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಾರಾಯಣಪೂರ ಗ್ರಾಮದಲ್ಲಿ ನೂತನ ಡಿಜಿಟಲ್ ಗ್ರಂಥಾಲಯವನ್ನು ರೋಣ ಶಾಸಕ ಜಿ.ಎಸ್. ಪಾಟೀಲ ಶುಕ್ರವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮನುಷ್ಯನಿಗೆ ಜೀವಿಸಲು ಅನ್ನ, ನೀರು, ಗಾಳಿ ಹೇಗೆ ಮುಖ್ಯವೋ ಹಾಗೆಯೆ ಜ್ಞಾನವೂ ಸಹ ಮುಖ್ಯ. ಈ ಜ್ಞಾನವು ಓದುವದರಿಂದ ಬರುತ್ತದೆ. ಅದಕ್ಕೆಂದೇ ನಮ್ಮ ಜಿಲ್ಲೆಯಲ್ಲಿ 92 ನೂತನ ಗ್ರಾಮ ಗ್ರಂಥಾಲಯಗಳನ್ನು ತೆರೆಯಲು ನಮ್ಮ ಸರಕಾರ ನಿರ್ಧರಿಸಿದೆ. ಈ ಗ್ರಂಥಾಲಯದ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಸಕರು ಪ್ರಾಥಮಿಕ ಶಾಲಾ ಆವರಣದಲ್ಲಿ ನೂತನವಾಗಿ ನಿರ್ಮಾಣಗೊಂಡ ಅಕ್ಷರ ದಾಸೋಹದ ಅಡುಗೆ ಕೋಣೆಯನ್ನು ಉದ್ಘಾಟಿಸಿದರು. ಈ ಗ್ರಮಕ್ಕೆ ಬೇಕಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದ ಶಾಸಕರು, ಸಿಸಿ ರಸ್ತೆ ಕಾಮಗಾರಿಯನ್ನು ಶೀಘ್ರದಲ್ಲಿಯೆ ಪ್ರಾರಂಭಿಸಲಾಗುವದೆಂದರು.

ತಾ.ಪಂ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ, ಗ್ರಾ.ಪಂ ಅಧ್ಯಕ್ಷೆ ತನುಜಾ ಹಾದಿಮನಿ, ಸದಸ್ಯ ರಾಜೇಸಾಬ್ ನದಾಫ್, ಎಸ್‌ಡಿಎಂಸಿ ಅಧ್ಯಕ್ಷ ಮುತ್ತಪ್ಪ ಹಂಚಿನಾಳ, ಶೋಭಾ ಗದಗಿನಮಠ, ಯಲ್ಲಪ್ಪ ಗುರಿಕಾರ, ವಿ.ಬಿ. ಸೋಮನಕಟ್ಟಿಮಠ, ಪ್ರಕಾಶ ಮುಧೋಳ, ಮಾರುತಿ ಪೂಜಾರ, ಈಶ್ವರಗೌಡ ಸೂರಪ್ಪಗೌಡ್ರ, ಪಿಡಿಒ ಸಂತೋಷಕುಮಾರ ಹೂಗಾರ, ಗ್ರಂಥಪಾಲಕ ಸುರೇಶ ಪತ್ತಾರ, ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಶಂಕರ ಹಡಗಲಿ, ಮುಖ್ಯ ಶಿಕ್ಷಕಿ ಜೆ.ಬಿ. ರಿಸಲ್ದಾರ, ಗ್ರಾಮದ ಗಣ್ಯರು ಉಪಸ್ಥಿತರಿದ್ದರು.

# ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಚಿತ್ರಕಲಾ ಶಿಬಿರ




■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕದ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಗದಗ ನಗರದ ಡಾ. ಬಿ.ಆರ್. ಅಂಬೇಡ್ಕರ್ ಸಭಾ ಭವನದಲ್ಲಿ ಶನಿವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ವಿಷಯದ ಕುರಿತು ಗದಗ ಜಿಲ್ಲೆಯ ಎಲ್ಲಾ ವಸತಿ ಶಾಲೆಗಳ ಚಿತ್ರಕಲಾ ಶಿಕ್ಷಕರಿಂದ ಚಿತ್ರಕಲಾ ಶಿಬಿರ ಏರ್ಪಡಿಸಲಾಗಿತ್ತು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಚಿತ್ರಕಲಾ ಶಿಬಿರದಲ್ಲಿ ಚಿತ್ರ ರಚನೆ ವೀಕ್ಷಿಸಿ ಶಿಕ್ಷಕರಿಗೆ ಶುಭ ಕೋರಿ ಮಾತನಾಡಿ, ಜಿಲ್ಲೆಯ ಎಲ್ಲಾ ವಸತಿ ಶಾಲೆಗಳ ಚಿತ್ರಕಲಾ ಶಿಕ್ಷಕರಿಂದ ಉತ್ತಮ ಚಿತ್ರಕಲೆಗಳು ಮೂಡಿಬರಲಿ. ಈ ಚಿತ್ರಗಳು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಗೆ ಮೆರಗು ನೀಡುವಂತಾಗಲಿ ಎಂದು ಹೇಳಿದರು.

ನುರಿತು ಚಿತ್ರಕಲಾ ಶಿಕ್ಷಕರು ರಚಿಸುವ ಚಿತ್ರಗಳು ಚಿತ್ರಗಳನ್ನು ವಿಕ್ಷಿಸುವ ಮಕ್ಕಳು, ಸಾರ್ವಜನಿಕರಿಗೆ ಪ್ರಜಾಪ್ರಭುತ್ವ ಕುರಿತು ಗೌರವ ಇಮ್ಮಡಿಗೊಳ್ಳಲು ಪ್ರೇರಣೆಯಾಗಲಿ. ಇದರಿಂದ ನಮ್ಮ ಪ್ರಜಾಪ್ರಭುತ್ವ ಇನ್ನಷ್ಟು ದೃಢವಾಗಲು ಸಹಕಾರ ದೊರಯುತ್ತದೆ ಎಂದು ಅಭಿಪ್ರಾಯಪಟ್ಟರು.

ಚಿತ್ರಕಲಾ ಶಿಕ್ಷಕರು ತಮ್ಮದೇ ರೀತಿಯ ಶೈಲಿಯಲ್ಲಿ ಚಿತ್ರಗಳನ್ನು ಮನೋಜ್ಞವಾಗಿ ರಚಿಸುವ ಮೂಲಕ ಗಮನ ಸೆಳೆದರು. ನನ್ನ ಮತ-ನನ್ನ ಹಕ್ಕು, ಭಾರತ ಸಂವಿಧಾನ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ, ನನ್ನ ಮತ-ನನ್ನ ಭವಿಷ್ಯ ಹಾಗೂ ಅಂಬೇಡ್ಕರ್ ಸಂವಿಧಾನ ಕುರಿತ ವಿಷಯದ ಬಗ್ಗೆ ತಮ್ಮ ಕಲೆಯ ಮೂಲಕ ಬೆಳಕು ಚೆಲ್ಲಿದರು.

ಈ ವೇಳೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಸೇರಿದಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಜಿಲ್ಲೆಯ ಚಿತ್ರಕಲಾ ಶಿಕ್ಷಕರು, ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಹಿಂದೂ ಮಹಾಗಣಪತಿ ಸನ್ನಿಧಿಯಲ್ಲಿ ನಡೆದ ಧರ್ಮಸಭೆಯಲ್ಲಿ ಮಲ್ಲಿಕಾರ್ಜುನ ಬಾಳಿಕಾಯಿ**

# ನಾವೆಲ್ಲ ನವ ಭಾರತದ ಕಾಲಘಟ್ಟದಲ್ಲಿದ್ದೇವೆ

■ವಿಜಯಸಾಕ್ಷಿ ಸುದ್ದಿ, ಗದಗ

ಬೇರೆ ಮತ ಪಂಥಗಳು ನಶಿಸಿ ಹೋಗುತ್ತಿರುವ ಸಂದರ್ಭದಲ್ಲಿಯೂ ಸಹ ಸನಾತನ ಹಿಂದೂ ಧರ್ಮದ ಬೇರುಗಳು ಗಟ್ಟಿಗೊಳ್ಳುತ್ತಾ ಸಾಗಿರುವುದಕ್ಕೆ ಹಿಂದೂ ಧರ್ಮದ ಕೊಡುಗೆ ಮತ್ತು ಹಿಂದೂ ಹೋರಾಟಗಾರರ ಅಪ್ರತಿಮ ಪ್ರಯತ್ನ ಕಾರಣವಾಗಿದೆ ಎಂದು ಪ್ರಮುಖ ವಾಗ್ಮಿ, ಹಿಂದೂ ಪರ ಹೋರಾಟಗಾರ ಮಲ್ಲಿಕಾರ್ಜುನ ಬಾಳಿಕಾಯಿ ಹೇಳಿದರು.



ಅವರು ಶುಕ್ರವಾರ ಸಂಜೆ ಗದಗ ನಗರದ ಶ್ರೀ ಸುದರ್ಶನ ಚಕ್ರ ಯುವ ಮಂಡಳಿ ವತಿಯಿಂದ ಪ್ರತಿಷ್ಠಾಪಿಸಲಾದ ಹಿಂದೂ ಮಹಾಗಣಪತಿ ಸನ್ನಿಧಿಯಲ್ಲಿ ಆಯೋಜಿಸಲಾಗಿದ್ದ ಧರ್ಮ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಮತಾಂತರ, ಭಯೋತ್ಪಾದನೆ, ಲವ್ ಜಿಹಾದ್‌ನಂತಹ ದುಷ್ಕೃತ್ಯಗಳಿಂದ ದೇಶ ಗೆಲ್ಲುವ ಪ್ರಯತ್ನಗಳು ಹಿಂದಿನಿಂದಲೂ ನಿರಂತರವಾಗಿ ನಡೆಯುತ್ತಿವೆ. ಭಾರತವನ್ನು ಅಭದ್ರಗೊಳಿಸುವ ಶಕ್ತಿಗಳ ಪ್ರಯತ್ನ ಹಿಂದುತ್ವದ ಗಟ್ಟಿತನದಿಂದ ನಿರಂತರ ವಿಫಲವಾಗುತ್ತಿದೆ. ಆದರೆ ಈ ದೇಶದಲ್ಲಿ ಹಿಂದೂಗಳ ಸರ್ವನಾಶ ಮತ್ತು ಗುಡಿ-ಗುಂಡಾರಗಳ ಧ್ವಂಸಕ್ಕೆ ಕಾರಣನಾದ ದುರುಳ ಔರಂಗಜೇಬ ಇಂದು ಇಲ್ಲಿನ ಕೆಲವರಿಗೆ ಪ್ರೇರಣೆಯಾಗಿದ್ದಾನೆ. ಇಂಥವರಿಗೆ ಕುಮುಕ್ಕು ನೀಡುವವರಲ್ಲಿ ಕೆಲವರು ಹಿಂದೂಗಳೂ ಸೇರಿಕೊಂಡಿರುವುದು ವಿಪರ್ಯಾಸದ ಸಂಗತಿ ಎಂದರು.


ಯುದ್ಧಭೂಮಿಯಲ್ಲಿ ಬೋಧನೆಯಾದ ಭಗವದ್ಗೀತೆ ಸರ್ವಶ್ರೇಷ್ಠ ಗ್ರಂಥವಾಗಿದ್ದು, ಶ್ರೀಕೃಷ್ಣ ಅರ್ಜುನನಿಗೆ ಗೀತೆ ಬೋಧಿಸುವ ಅಂದಿನ ಕಾಲದಲ್ಲೂ ಸಹ ಸನಾತನ ಹಿಂದೂ ಧರ್ಮವಿತ್ತು ಎನ್ನುವುದಕ್ಕೆ ಸಾಕ್ಷಿಯಿದೆ. ಹಿಂದವೀ ಸಾಮ್ರಾಜ್ಯ ಸ್ಥಾಪಕ ಶಿವಾಜಿ ಮಹಾರಾಜ್ ಹಾಗೂ ಸ್ವಾಮಿ ವಿವೇಕಾನಂದರು ಹಿಂದುತ್ವದ ಪ್ರತೀಕವಾಗಿದ್ದಾರೆ ಎಂದರು.

ಧರ್ಮದ ರಕ್ಷಣೆ ಮತ್ತು ಸಮೃದ್ಧ, ಸದೃಢ ಭಾರತದ ಕನಸು ನನಸಾಗಿಸುವಲ್ಲಿ ಹಿಂದೂ ಮಹಾಗಣಪತಿ ಪ್ರೇರಕ ಶಕ್ತಿಯಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಹಿಂದೂ ಮಹಾಗಣಪತಿ ಮಂಡಳಿಯ ಗೌರವಾಧ್ಯಕ್ಷ ಶ್ರೀಕಾಂತ ಖಟವಟೆ, ಅಧ್ಯಕ್ಷ ರವಿರಾಜ್ ಮಾಳೆಕೊಪ್ಪಮಠ, ರಾಘವೇಂದ್ರ ಹಬೀಬ, ಎಸ್.ಹೆಚ್. ಶಿವನಗೌಡ, ರಾಜು ಕುರಡಗಿ, ಶ್ರೀಪತಿ ಉಡುಪಿ, ಸುಧೀರ್ ಕಾಟಿಗರ ಮುಂತಾದವರು ಉಪಸ್ಥಿತರಿದ್ದರು.

> ಭಾರತದಲ್ಲಿ ಇಂದು ಜನರ ಮನಸ್ಥಿತಿ, ನಾಯಕತ್ವ ಬದಲಾವಣೆಯಾಗಿದೆ, ಭಾರತವೂ ಬದಲಾವಣೆಯಾಗಿದೆ. ನಾವೆಲ್ಲ ಇಂದು ನವ ಭಾರತದ ಕಾಲಘಟ್ಟದಲ್ಲಿದ್ದೇವೆ. ದುಷ್ಕೃತ್ಯಗಳಿಗೆ ತಕ್ಕ ಉತ್ತರ ನೀಡುವ ಸ್ಥಿತಿಯಲ್ಲಿ ಸುಭದ್ರ ಭಾರತ ನಮ್ಮೆದುರಿಗಿದೆ ಎಂದು ಮಲ್ಲಿಕಾರ್ಜುನ ಬಾಳಿಕಾಯಿ ಹೇಳಿದರು.

# ಸಮಯಕ್ಕೆ ಹೆಚ್ಚಿನ ಮಹತ್ವ ನೀಡಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ಸರ್ಕಾರಿ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಭೆ ಬಿ.ಎಸ್. ಈಳಿಗೇರ ಅಧ್ಯಕ್ಷತೆಯಲ್ಲಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜರುಗಿತು.

ಸಭೆಗೂ ಮುನ್ನ ಈಚೆಗೆ ನಿಧನರಾದ ಲಕ್ಷ್ಮೇಶ್ವರ ವಕೀಲರ ಸಂಘದ ಮಾಜಿ ಅಧ್ಯಕ್ಷ ವಿ.ಎಲ್. ಪೂಜಾರ ಅವರ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ಸಮಾರಂಭದಲ್ಲಿ ಸಂಘದ ಆಜೀವ ಸದಸ್ಯರು ಮತ್ತು ಶಿರಹಟ್ಟಿ ತಾಲೂಕು ದೈಹಿಕ ಶಿಕ್ಷಣ ಸಂಯೋಜಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿ 75 ವಸಂತಗಳನ್ನು ಪೂರೈಸಿದ ಆರ್.ಎನ್. ಪಂಚಭಾವಿ ದಂಪತಿಯನ್ನು ಸನ್ಮಾನಿಸಲಾಯಿತು.

ಸಂಘದ ಉಪಾಧ್ಯಕ್ಷ ಪೂರ್ಣಾಜಿ ಖರಾಟೆ ಸಂಘದ ಬೆಳವಣಿಗೆ ಕುರಿತು ಮಾತನಾಡಿದರು. ಸನ್ಮಾನ ಸ್ವೀಕರಿಸಿದ ಆರ್.ಎನ್. ಪಂಚಭಾವಿ ಮಾತನಾಡಿ, ಜೀವನದಲ್ಲಿ ಶಿಸ್ತು ಮತ್ತು ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಯಾವುದೇ ಹೊಗಳಿಕೆ-ತೆಗಳಿಕೆಗೆ ಬೆಲೆ ಕೊಡಬಾರದು. ನೀವು ಮಾಡುವ ಕೆಲಸ ನಿಮಗೆ ತೃಪ್ತಿ ಕೊಟ್ಟರೆ ಅದು ಭಗವಂತನಿಗೆ ಸಲ್ಲುತ್ತದೆ. ಜನ್ಮ ಕೊಟ್ಟ ತಂದೆ-ತಾಯಿಯರನ್ನು ಗೌರವದಿಂದ ಕಾಣಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾದಾಪುರಮಠ, ಸಿ.ಜಿ. ಹಿರೇಮಠ, ಐ.ಎನ್. ಹುಬ್ಬಳ್ಳಿ, ಆರ್.ಎನ್. ಸಾತಪುತೆ, ಎಸ್.ವಿ. ಅಂಗಡಿ ಮುಂತಾದವರು ಇದ್ದರು.

## ಚೀನಾಗೆ ಬಿಗ್ ಶಾಕ್ ಕೊಟ್ಟ ಅಮೆರಿಕ; 50-100% ಸುಂಕ ವಿಧಿಸಲು ಟ್ರಂಪ್ ಕರೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಚೀನಾ ಗೆ ಬಿಗ್ ಶಾಕ್ ಕೊಟ್ಟಿರುವ ಅಮೆರಿಕ ಅಧ್ಯಕ್ಷ ಟ್ರಂಪ್ ಅವರು 50-100% ಸುಂಕ ವಿಧಿಸಲು ಕರೆ ಕೊಟ್ಟಿದ್ದಾರೆ.

ಎಸ್, ರಷ್ಯಾದ ಆರ್ಥಿಕ ಪ್ರಾಬಲ್ಯವನ್ನು ದುರ್ಬಲಗೊಳಿಸಲು ಚೀನಾದ ಮೇಲೆ 50 ರಿಂದ 100% ರಷ್ಟು ಸುಂಕಗಳನ್ನು ವಿಧಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ನ್ಯಾಟೋಗೆ ಕರೆ ನೀಡಿದ್ದಾರೆ.

ಎಲ್ಲಾ ನ್ಯಾಟೋ ರಾಷ್ಟ್ರಗಳು ಒಪ್ಪಿಕೊಂಡು ಅದೇ ರೀತಿ ಮಾಡಲು ಪ್ರಾರಂಭಿಸಿದಾಗ ಮತ್ತು ಎಲ್ಲಾ ನ್ಯಾಟೋ ರಾಷ್ಟ್ರಗಳು ರಷ್ಯಾದಿಂದ ತೈಲ ಖರೀದಿಸುವುದನ್ನು ನಿಲ್ಲಿಸಿದಾಗ, ನಾನು ರಷ್ಯಾದ ಮೇಲೆ ಪ್ರಮುಖ ನಿರ್ಬಂಧಗಳನ್ನು ವಿಧಿಸಲು ಸಿದ್ಧನಿದ್ದೇನೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

### ಪದ್ಮಭೂಷಣ ನಾಡೋಜ ಡಾ. ಪಂ.ಪುಟ್ಟರಾಜ ಕವಿಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವದ ನಿಮಿತ್ತ ಲೇಖನ

# ಮಹಾ ಕ್ರಿಯಾಶಕ್ತಿ ಪಂ. ಡಾ. ಪುಟ್ಟರಾಜ ಗವಾಯಿಗಳು

ಕರ್ನಾಟಕದ ಸಾಂಸ್ಕೃತಿಕ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ನಾಡಿನ ಹಿರಿಯರ ಸಾಧಕರಲ್ಲಿ ಪಂ. ಡಾ. ಪುಟ್ಟರಾಜ ಗವಾಯಿಗಳವರು ಪ್ರಮುಖರು. ಕವಿಗಳಾಗಿ, ಸಂಗೀತಗಾರರಾಗಿ, ತ್ರಿಭಾಷಾ ಪಂಡಿತರಾಗಿ, ಕೀರ್ತನಕಾರರಾಗಿ ಅಕ್ಷರಲೋಕವನ್ನು ತಮ್ಮ ಸಾಹಿತ್ಯ ಕೃತಿಗಳಿಂದ ಅಕ್ಷಯ ಲೋಕವನ್ನಾಗಿಸಿದ ಮಹಾ ಕ್ರಿಯಾಶಕ್ತಿ ಪಂ. ಡಾ. ಪುಟ್ಟರಾಜ ಗವಾಯಿಗಳವರು.

ಕರ್ನಾಟಕ ಹಾಗೂ ಹಿಂದೂಸ್ತಾನಿ ಉಭಯ ಸಂಗೀತ ವಿದ್ಯೆಗಳನ್ನು ತಮ್ಮ ಸಂಚಾರಿ ಪಾಠಶಾಲೆಯ ಮುಖೇನ ನೂರಾರು ಕಲಾವಿದರನ್ನು ನಾಡಿಗೆ ಕಾಣಿಕೆಯಾಗಿ ನೀಡಿದ ಮಹಾ ಕಾರ್ಯದ ರೂವಾರಿಗಳು. ಪುಟ್ಟರಾಜ ಗವಾಯಿಗಳು 1944ರಲ್ಲಿ ಗದುಗಿನಲ್ಲಿ ಶ್ರೀವೀರೇಶ್ವರ ಪುಣ್ಯಾಶ್ರಮವನ್ನು ಸ್ಥಾಪಿಸುವುದರ ಮೂಲಕ ಅಂಧ, ಅನಾಥ, ಬಡ ಮಕ್ಕಳ ಬದುಕಿನಲ್ಲಿ ಭರವಸೆಯಿಂದ ಬದುಕುವಂತೆ ಆತ್ಮಬಲವನ್ನು ತುಂಬಿದರು. ವೀರೇಶ್ವರ ಪುಣ್ಯಾಶ್ರಮವನ್ನು ಅಂತಾರಾಷ್ಟ್ರೀಯ ಮಟ್ಟದ ಸಂಗೀತ ವಿಶ್ವವಿದ್ಯಾಲಯವನ್ನಾಗಿ ರೂಪಿಸಿದವರು.

ಗವಾಯಿಗಳು ಶಿಖರಪ್ರಾಯರಾದ ಡಾ. ಪುಟ್ಟರಾಜ ಗವಾಯಿಗಳು ಬಹುಮುಖಿ ವ್ಯಕ್ತಿತ್ವದೊಂದಿಗೆ ಸಾಹಿತ್ಯ, ವೃತ್ತಿ ರಂಗಭೂಮಿ, ಸಂಗೀತ, ಸಾಮಾಜಿಕ ಸೇವೆ, ಶೈಕ್ಷಣಿಕ ಪ್ರಸಾರಗಳ ಮೂಲಕ ಬದುಕು ಬರಹವನ್ನು ರೂಢಿಸಿಕೊಂಡವರು. ಪುಟ್ಟರಾಜರ ಬದುಕು-ಬರಹಕ್ಕಿಂತಲೂ ಹಿರಿದಾದುದು ಅವರ ಸಾಧನೆ.

ದಿ. 03-03-1914ರಲ್ಲಿ ಜನಿಸಿದ ಡಾ. ಪುಟ್ಟರಾಜ ಗವಾಯಿಗಳವರ ಮೂಲ ಹೆಸರು ಚೆನ್ನಬಸಯ್ಯ. ಗವಾಯಿಗಳವರ ತಾಯಿಯ ತವರು ಮನೆ ಹಾವೇರಿ ಹತ್ತಿರದ ದೇವಗಿರಿ ಗ್ರಾಮ. ಪುಟ್ಟಯ್ಯ ಜನ್ಮಾಂಧರನಾಗಿರಲಿಲ್ಲ. ಕಣ್ಣು ಬೇನೆಯ ಕಾರಣವಾಗಿ ನಾಟಿ ವೈದ್ಯರ ಸಲಹೆ ಮೇರೆಗೆ ಚಿಕ್ಕ ಬಾಲಕನೆಳೆಯ ಕಣ್ಣುಗಳಿಗೆ ತೊನಸಿಗಳನ್ನು ಮುಟ್ಟಿಸುವ ಸಂದರ್ಭದಲ್ಲಿ ತೊನಸಿಗಳು ಕೈ ಜಾರಿ ಕಣ್ಣುಗಳಲ್ಲಿ ಬಿದ್ದು ಕಣ್ಣು ಗುಡ್ಡೆಗಳನ್ನು ತಿಂದು ಹಾಕಿದುದಕ್ಕಾಗಿ ಪುಟ್ಟಯ್ಯನಾಗ ಕುರಡನಾಗಬೇಕಾದ ಪ್ರಸಂಗವನ್ನು ತಿಳಿಸಿದ್ದಾರೆ. ಬಾಲ್ಯದಲ್ಲಿಯೇ ತಂದೆಯನ್ನು ಕಳೆದುಕೊಂಡ ಎಂಟು ವರ್ಷದ ಮಗನೊಂದಿಗೆ 1922ರಲ್ಲಿ ದೇವರಹೊಸಪೇಟೆಯಿಂದ ದೇವಗಿರಿಗೆ ಬಂದು ತನ್ನ ಸಹೋದರನಾದ ಚಂದ್ರಶೇಖರ ಅವರಲ್ಲಿ ಉಳಿದುಕೊಳ್ಳುತ್ತಾರೆ.

ಸೋದರ ಮಾವನಾದ ಚಂದ್ರಶೇಖರಯ್ಯನವರು ಪಂಚಾಕ್ಷರ ಗವಾಯಿಗಳವರ ಶಿಷ್ಯರು. ಅಳಿಯ ಪುಟ್ಟಯ್ಯನನ್ನು ಸಂಗೀತಗಾರನನ್ನಾಗಿ ರೂಪಿಸುವ ಮಹಾದಾಸೆಯ ಸಂಕಲ್ಪದಿಂದ ಪಂಚಾಕ್ಷರ ಗವಾಯಿಗಳಲ್ಲಿ ಕರೆ ತರುತ್ತಾರೆ. ಈ ಸಂದರ್ಭದಲ್ಲಿ ಪಂಚಾಕ್ಷರ ಗವಾಯಿಗಳವರ ಪಾಠಶಾಲೆಯು ನವಲಗುಂದದ ಗವಿಮಠದಲ್ಲಿ ವಾಸ್ತವ್ಯವನ್ನು ಹೊಂದಿಕೊಂಡಿದ್ದು, ಅಳಿಯನಾದ ಪುಟ್ಟಯ್ಯನನ್ನು ಪಂಚಾಕ್ಷರ ಗವಾಯಿಗಳಲ್ಲಿ ಸಂಗೀತ ವಿದ್ಯೆಯನ್ನು ಕಲಿಸುವುದಕ್ಕಾಗಿ ಸಂಚಾರಿ ಪಾಠಶಾಲೆಗೆ ಸೇರಿಸುತ್ತಾರೆ. ಪಂಚಾಕ್ಷರ ಗವಾಯಿಗಳ ಸಂಚಾರಿ ಸಂಗೀತ ಪಾಠಶಾಲೆಯನ್ನು ಸೇರಿದ ಪುಟ್ಟಯ್ಯನಿಗೆ ಸಂಗೀತ, ಸಾಹಿತ್ಯ, ಶಾಸ್ತ್ರ, ಸಾಹಿತ್ಯ ಅಧ್ಯಯನಕ್ಕೆ ಸಂಬಂಧಿಸಿದ ಬೇರೆ ಬೇರೆ ಶಿಕ್ಷಕರನ್ನು, ವಿದ್ಯಾಭ್ಯಾಸ ಪರಿಣಿತರನ್ನು, ಬೇರೆ ಬೇರೆ ಕಲಾವಿದರನ್ನು ಕರೆಯಿಸಿ ಪಾಠಶಾಲೆಯಲ್ಲಿ ಎಲ್ಲ ವಿದ್ಯಾರ್ಥಿಗಳಿಗೆ ಸಂಗೀತ ಅಭ್ಯಾಸ ಮಾಡಲು ಅನುಕೂಲ ಮಾಡಿಕೊಟ್ಟವರು ಪಂಚಾಕ್ಷರ ಗವಾಯಿಗಳವರು.



ಗವಾಯಿಗಳವರು ಪುಟ್ಟಯ್ಯನವರಿಗೆ ಸಾಹಿತ್ಯ ವ್ಯಾಕರಣ, ಛಂದಸ್ಸು ಅಲಂಕಾರ ಚರಿತ್ರೆಯ ವಿಷಯಗಳನ್ನು ಅಧ್ಯಯನ ಮಾಡಿಸಿಕೊಟ್ಟರು. ತನಗೆ ದೊರಕಿದ ಗುರು ಪರಂಪರೆಯ ಸದುಪಯೋಗವನ್ನು ಪಡೆದುಕೊಂಡ ಪುಟ್ಟಯ್ಯ ಪಂಚಾಕ್ಷರ ಗವಾಯಿಗಳ ಶಿಷ್ಯನಾಗಿ ಅತ್ಯಂತ ಕಡಿಮೆ ಅವಧಿಯಲ್ಲಿ ಮಹಾಸಂಗೀತಗಾರರಾಗಿ ರೂಪಗೊಂಡರು.

1922ರಲ್ಲಿ ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆಯನ್ನು ಸೇರಿದ ಪುಟ್ಟರಾಜರು ಸಂಗೀತ ವಿದ್ಯೆಯನ್ನು ಪಡೆಯುವುದರೊಂದಿಗೆ ಸಾಹಿತ್ಯ ರಚನೆಯಲ್ಲಿ ತೊಡಗಿದರು. ನಾಡಿನ ತುಂಬೆಲ್ಲಾ ಸಂಚಾರಿ ಪಾಠಶಾಲೆಯನ್ನು ತೆಗೆದುಕೊಂಡು ಸಂಚರಿಸಿದರು. ಸಂಚಾರಿ ಪಾಠಶಾಲೆಯಲ್ಲಿರುವ ವಿದ್ಯಾರ್ಥಿಗಳ ಊಟ ವಸತಿಯ ಜವಾಬ್ದಾರಿಯನ್ನು ಹೊತ್ತುಕೊಂಡು ನಾಡಿನ ಬೇರೆ ಬೇರೆ ಊರುಗಳಲ್ಲಿ ಕ್ಯಾಂಪ್ ಮಾಡಲಾಗುತ್ತಿದ್ದ ಸಂದರ್ಭದಲ್ಲಿ ಸಂಗೀತ ಪಾಠಶಾಲೆಯನ್ನು ನಡೆಸಲು ಆರ್ಥಿಕ ತೊಂದರೆಯನ್ನು ಪಂಚಾಕ್ಷರ ಗವಾಯಿಗಳು ಎದುರಿಸಬೇಕಾಗಿ ಬಂದಿತು.

ಈ ಸಂದರ್ಭದಲ್ಲಿ ಪುಟ್ಟರಾಜರು ಸೂಕ್ಷ್ಮವಾಗಿ ವಿಚಾರಿಸಿಕೊಂಡು ಗುರುಗಳ ಸಹಾಯಕ್ಕೆ ಮಾಡಿದ ವಿಚಾರ ಅತ್ಯಂತ ಮಹತ್ವದ ಸಂಗತಿಯನ್ನು ದಾಖಲು ಮಾಡಲಾಗಿದೆ. ಯುಗದ ಸಂಚಾರಿ ಪಾಠಶಾಲೆಯಲ್ಲಿರುವ ವಿದ್ಯಾರ್ಥಿಗಳಿಗೆ ನಾಟ್ಯ ಕಲೆಯನ್ನು ತರಬೇತಿ ಕೊಡುವುದರೊಂದಿಗೆ ಶ್ರೀ ಕುಮಾರೇಶ್ವರ ಕೃಪಾಪೋಷಿತ ನಾಟಕ ಕಂಪನಿಯನ್ನು ಪ್ರಾರಂಭಿಸಿದರು. ಸಾಲದ ಹೊರೆ ಹೆಚ್ಚಾಗಿ ಆರ್ಥಿಕ ಸಂಕಷ್ಟ ಎದುರಿಸುವ ಸಂದರ್ಭದಲ್ಲಿ 1938-39 ರಲ್ಲಿ ಪಂ. ಪುಟ್ಟರಾಜ ಗವಾಯಿಗಳವರು 'ಸೊನ್ನಲಗಿ ಶ್ರೀ ಸಿದ್ದರಾಮೇಶ್ವರ' ನಾಟಕವನ್ನು ಬರೆದು ನರಗುಂದದಲ್ಲಿ ನಾಟಕ ಪ್ರಾರಂಭವಾಗಿ ಅದ್ಭುತ ಪ್ರದರ್ಶನ ಕಂಡು ತಕ್ಕಮಟ್ಟಿಗೆ ಸಾಲದ ಹೊರೆ ಕಡಿಮೆಯಾಯಿತು.

1944ರಲ್ಲಿ ಪಂಚಾಕ್ಷರ ಗವಾಯಿಗಳು ಲಿಂಗೈಕ್ಯರಾದ ಬಳಿಕ ಶ್ರೀ ವೀರೇಶ್ವರ ಪುಣ್ಯಾಶ್ರಮದ ಅಧಿಕಾರವನ್ನು ವಹಿಸಿಕೊಂಡು ಪುಟ್ಟರಾಜ ಗವಾಯಿಗಳು ವೀರೇಶ್ವರ ಪುಣ್ಯಾಶ್ರಮವನ್ನು ಸಂಗೀತ ಕ್ಷೇತ್ರದ ಮಹಾಸಂಸ್ಥೆಯಾಗಿ ಬೆಳೆಸಿದರು. 21ನೇ ಶತಮಾನದಲ್ಲೂ ಡಾ. ಪುಟ್ಟರಾಜ ಗವಾಯಿಗಳ ವೀರಶೈವ ಪುರಾಣ ಪರಂಪರೆಯನ್ನು ತಮ್ಮ ಪುರಾಣ ಕೃತಿಗಳ ಮೂಲಕವಾಗಿ ಮುಂದುವರೆಸಿಕೊಂಡು ಬರುವುದರೊಂದಿಗೆ ಷಟ್ಪದಿ, ಛಂದಸ್ಸಿನಲ್ಲಿ ತಮ್ಮ ಕೃತಿಗಳ ಛಂದೋಪ್ರಕಾರಕ್ಕನುಗುಣವಾಗಿ ಕಾವ್ಯಗಳನ್ನು ರಚಿಸಿದ್ದಾರೆ. ಭಾಮಿನಿ ಷಟ್ಪದಿ, ವಾರ್ಧಕ ಷಟ್ಪದಿಗಳನ್ನು ಪುರಾಣ ಕೃತಿಗಳ ಬರವಣಿಗೆಗೆ ಬಳಸಿಕೊಂಡಿದ್ದಾರೆ.

ಪಂಡಿತ ಪಂಚಾಕ್ಷರ ಗವಾಯಿಗಳ ಶಿಕ್ಷಣ ಸಮಿತಿಯ ಅಡಿಯಲ್ಲಿ ಶಿಶುಮಂದಿರದಿಂದ ಪ್ರಾರಂಭಗೊಂಡ ಪದವಿ ಮಹಾವಿದ್ಯಾಲಯದ ಹಾಗೂ ಸ್ನಾತಕೋತ್ತರ ಉನ್ನತ ಶೈಕ್ಷಣಿಕ ಹಂತದವರೆಗೆ ಸಂಸ್ಥೆಗಳನ್ನು ಪ್ರಾರಂಭಿಸಿದ ನಂತರ ಸಾವಿರಾರು ವಿದ್ಯಾರ್ಥಿಗಳಿಗೆ ಅಕ್ಷರ ಕಲಿಕೆಯ ಮೂಲಕ ಶಿಕ್ಷಣ ಸೇವೆ ಸಲ್ಲಿಸುತ್ತಿರುವ ಸಂಸ್ಥೆಯಾಗಿ ರೂಪಕೊಟ್ಟವರು ಪುಟ್ಟರಾಜ ಗವಾಯಿಗಳು. ಲೋಕ ಕಲ್ಯಾಣಕ್ಕಾಗಿ ಪುಟ್ಟರಾಜರು ಮಾಡಿದ ಪ್ರಯತ್ನದ ಫಲವಾಗಿ ಇಂದು ಹಲವಾರು ಬಡಮಕ್ಕಳ ಬಡವಾಗುತ್ತಿದ್ದ ಬದುಕು ಚಿಗುರೊಡೆದು ಘಮಘಮಿಸುವ ನಂದನವಾಗಿದೆ.

ಡಾ. ಪುಟ್ಟರಾಜ ಗವಾಯಿಗಳ ಜೀವಿತ ಅವಧಿಯಲ್ಲಿ ಅವರಿಗೆ ಅರ್ಪಿಸಲಾದ ತುಲಾಭಾರಗಳು, ವಿಶ್ವದಲ್ಲಿಯೇ ಐತಿಹಾಸಿಕ ದಾಖಲೆಗಳನ್ನು ನಿರ್ಮಿಸಿರುವುದು ವಿಶೇಷ. ಗಾನಯೋಗಿ ಪಂ. ಪುಟ್ಟರಾಜ ಸೇವಾ ಸಮಿತಿ ಗದಗ ಹಾಗೂ ಶಿಷ್ಯ ಬಳಗದವರು ಪಂ. ಪುಟ್ಟರಾಜ ಕವಿ ಗವಾಯಿಗಳವರ ಹೆಸರನ್ನು ಅಜರಾಮರವಾಗಿಸಲು ಕಳೆದ 14 ವರ್ಷಗಳಿಂದ ಸಂಗೀತ, ಸಾಹಿತ್ಯ, ರಂಗಭೂಮಿ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಅವರಿಗೆ 'ಶಿವಯೋಗಿ ಶ್ರೀ ಪುಟ್ಟರಾಜ' ಪ್ರಶಸ್ತಿ ಹಾಗೂ ನಗದು ಕಾಣಿಕೆ ನೀಡಿ ಗೌರವಿಸುತ್ತ ಬಂದಿದೆ.

2025-26ನೇ ಸಾಲಿನಲ್ಲಿ ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಕೊಪ್ಪಳದ ಪಂ.ಸದಾಶಿವ ಪಾಟೀಲ (ಸಂಗೀತ), ಗದುಗಿನ ಪಂ. ವೀರೇಶ ಕಿತ್ತೂರ(ಸಂಗೀತ) ಹಾಗೂ ಬೆಂಗಳೂರಿನ ಪಂ. ನಾಗಲಿಂಗಯ್ಯ ಗವಾಯಿಗಳವರಿಗೆ ಇದೇ ಸೆ. 14ರಂದು ಸಂಜೆ 6.30 ಗಂಟೆಗೆ ಲಕ್ಷ್ಮೇಶ್ವರ ತಾಲೂಕಿನ ಯಳವತ್ತಿ ಗ್ರಾಮದ ಶ್ರೀ ಗುರು ಪುಟ್ಟರಾಜ ಸಂಗೀತ ಶಿಕ್ಷಣ ಸಮಿತಿಯ ಅಡಿಯಲ್ಲಿ ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ 'ಶಿವಯೋಗಿ ಶ್ರೀ ಪುಟ್ಟರಾಜ' ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

**- ಡಾ. ಶರಣಬಸವ ವೆಂಕಟಾಪೂರ.**
ನಿವೃತ್ತ ಪ್ರಾಧ್ಯಾಪಕರು.

### ಕುಡಿಯುವ ನೀರು ಸಂಗ್ರಹ ಘಟಕಗಳ ಸ್ಥಾಪನೆಗೆ ಸ್ಥಳ ಪರಿಶೀಲನೆ

# 24/7 ನೀರು ಪೂರೈಕೆಯ ಗುರಿ



ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ, ಇಇ ಜಗದೀಶ ಹೊಸಮನಿ, ಎಇ ಬಸಪ್ಪ ಚೌಡಪ್ಪನವರ, ಗುತ್ತಿಗೆದಾರರು, ಸೆಕ್ಷನ್ ಆಫೀಸರ್ ಹಾಗೂ ಸಿಬ್ಬಂದಿಗಳು, ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಅವರನ್ನೊಳಗೊಂಡ ತಂಡ ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್ ಮೈದಾನದ ಬಳಿ ಮತ್ತು ಹುಬ್ಬಳ್ಳಿ ರಸ್ತೆಯಲ್ಲಿರುವ ಲಕ್ಷ್ಮೀ ನಗರದ ಬಳಿ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲು ಜಾಗೆಗಳನ್ನು ಪರಿಶೀಲಿಸಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಪದೇ ಪದೇ ವ್ಯತ್ಯಯ ಉಂಟಾಗುತ್ತಿದ್ದು, ಜನರು ಇದರಿಂದ ಬೇಸತ್ತಿದ್ದಾರೆ. ಇದಕ್ಕಾಗಿ ಸುಮಾರು 37 ಕೋಟಿ ರೂಗಳ ವೆಚ್ಚದಲ್ಲಿ ಕುಡಿಯುವ ನೀರು ಪೂರೈಕೆಯ ವ್ಯವಸ್ಥೆ ಸರಿಪಡಿಸುವ ಕಾಮಗಾರಿಗೆ ಚಾಲನೆ ದೊರೆಯಲಿದ್ದು, ಈ ನಿಟ್ಟಿನಲ್ಲಿ ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯವರು ಶುಕ್ರವಾರ ಪಟ್ಟಣದಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸುವ ಸ್ಥಳಗಳನ್ನು ಗುರುತಿಸಿ ಪರಿಶೀಲಿಸಿದರು.

ಸುಮಾರು 2 ದಶಕಗಳಿಗಿಂತಲೂ ಅಧಿಕ ವರ್ಷಗಳ ಹಿಂದೆ ಮೇವುಂಡಿಯಿಂದ ಲಕ್ಷ್ಮೇಶ್ವರಕ್ಕೆ ನೀರು ಪೂರೈಸಲು ಹಾಕಿರುವ ಪೈಪ್‌ಲೈನ್ ಅಲ್ಲಲ್ಲಿ ತುಕ್ಕು ಹಿಡಿದು ನೀರು ಸೋರಿಕೆಯಾಗುತ್ತಿದೆ. ಇದರ ದುರಸ್ಥಿಗಾಗಿ ಮತ್ತು ಪಟ್ಟಣಕ್ಕೆ ನಿರಂತರ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ತುಕ್ಕು ಹಿಡಿದ ಪೈಪ್‌ಗಳ ದುರಸ್ಥಿ ಮತ್ತು ಪಟ್ಟಣದಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸುವ ಕುರಿತು ಇಲಾಖೆ ಸ್ಥಳ ಪರಿಶೀಲನೆಗೆ ಆಗಮಿಸಿದ್ದರು.

ಈ ಕುರಿತು ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮಾಹಿತಿ ನೀಡಿ, ಪಟ್ಟಣಕ್ಕೆ ಮೇವುಂಡಿಯಿಂದ ನೀರು ನೀರು ಪೂರೈಸುವ ಪೈಪ್‌ಲೈನ್‌ಗಳು ಅಲ್ಲಲ್ಲಿ ತುಕ್ಕು ಹಿಡಿದು ನೀರು ಸೋರಿಕೆಯಾಗುತ್ತಿದ್ದು, ಈ ಹಿನ್ನೆಲೆಯಲ್ಲಿ 37 ಕೋಟಿ ರೂಗಳ ವೆಚ್ಚದಲ್ಲಿ ನೀರು ಪೂರೈಕೆ ವ್ಯವಸ್ಥೆ ಸರಿಪಡಿಸುವ ಕಾಮಗಾರಿ ಪ್ರಾರಂಭವಾಗಲಿದೆ. ಅದಕ್ಕಾಗಿ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲು ಜಾಗೆಗಳನ್ನು ಪರಿಶೀಲನೆ ಮಾಡಿದ್ದಾರೆ. ಸೂರಣಗಿಯಿಂದ ಸುಮಾರು 4 ಕಿಮೀ ಪೈಪ್‌ಲೈನ್ ದುರಸ್ಥಿ ಮಾಡಲಾಗುವದು ಮತ್ತು ಇಲಾಖೆಯಿಂದ ಪಟ್ಟಣವನ್ನು 5 ಜೋನ್‌ಗಳಾಗಿ ಮಾಡಲಾಗುತ್ತಿದೆ. ಅದರಲ್ಲಿ ಸುಮಾರು 3 ಜೋನ್‌ಗಳಿಗೆ ನೀರು ಪೂರೈಕೆ ಮಾಡುವ ಯೋಜನೆ ಹೊಂದಲಾಗಿದೆ. 24/7 ನೀರು ಪೂರೈಸುವದು ಇದರ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ವೇಳೆ ಪುರಸಭೆ ಸಿಬ್ಬಂದಿ ಹನುಮಂತಪ್ಪ ನಂದೆಣ್ಣವರ, ಪೌರಕಾರ್ಮಿಕರ ಸಂಘದ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ, ನಿವೃತ್ತ ನೌಕರ ಗಂಗಾಧರ ಅರಳಿ ಮತ್ತು ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

# ಸಾರಿಗೆ ಸಂಸ್ಥೆಯಲ್ಲಿ ಪ್ರಗತಿ ಪರಿಶೀಲನಾ ಸಭೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕೇಂದ್ರ ಕಛೇರಿ ಹುಬ್ಬಳ್ಳಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಅವರ ಅಧ್ಯಕ್ಷತೆಯಲ್ಲಿ ಎಲ್ಲ ವಿಭಾಗಗಳ ಪ್ರಗತಿ ಪರಿಶೀಲನಾ ಸಭೆ ಗುರುವಾರ ನಡೆಯಿತು.

ಚಾಲನಾ ಸಿಬ್ಬಂದಿಗಳ ಬಳಕೆ ಉತ್ತಮಗೊಳಿಸುವುದು, ಅವಘಡ-ಅಪಘಾತ ರಹಿತ ಕಾರ್ಯಾಚರಣೆಗೆ ಒತ್ತು ನೀಡುವುದು, ಕೆ.ಎಂ.ಪಿ.ಎಲ್ ಈಪಿಕೆಎಮ್ ಸುಧಾರಿಸುವುದು ಇತ್ಯಾದಿ ವಿಷಯಗಳ ಕುರಿತು ಪ್ರಗತಿ ಪರಿಶೀಲಿಸಲಾಗಿ, ಮುಂಬರುವ ದಿನಗಳಲ್ಲಿ ಜನದಟ್ಟಣೆಗನುಗುಣವಾಗಿ ಕಾರ್ಯಾಚರಣೆ ಮಾಡುವಂತೆ, ವಾಣಿಜ್ಯ ಮಳಿಗೆಗಳ ಶುಲ್ಕವನ್ನು ಯು.ಪಿ.ಐ ಮುಖಾಂತರ ಪಾವತಿಸಲು ಉತ್ತೇಜಿಸುವಂತೆ ನಿರ್ದೇಶನ ನೀಡಿದರು.


ಈ ಸಂದರ್ಭದಲ್ಲಿ ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ, ಗಣೇಶ ರಾಠೋಡ, ಸಿದ್ದೇಶ್ವರ ಹೆಬ್ಬಾಳ, ಶ್ರೀನಿವಾಸಮೂರ್ತಿ ಸಿ., ಈ. ಇಮಾಮ್ ಕಾಸೀಮ್ ಕಂದಗಲ್ಲ, ಬಿ. ಬೋರಯ್ಯಾ ಸೋಮಣ್ಣ ಅಂಗಡಿ, ನಿತಿನ ಹೆಗಡೆ, ಶಶೀಧರ ಮರಿದೇವರಮಠ, ಅಧಿಕಾರಿಗಳಾದ ಸುನೀಲ್ ಎಮ್ ಮತ್ತು ಎಲ್ಲ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಸಂಚಾರ ಅಧಿಕಾರಿಗಳು, ತಾಂತ್ರಿಕ ಶಿಲ್ಪಿಗಳು, ಘಟಕ ವ್ಯವಸ್ಥಾಪಕರು ಉಪಸ್ಥಿತರಿದ್ದರು.

## ಹಾಸನ ಅಪಘಾತ: ಘಟನೆಗೆ ಕೋಮು ಬಣ್ಣ ಬಳಿಯುವವರ ಮೇಲೆ ಕಾನೂನು ಕ್ರಮ; ಸಚಿವ ಕೃಷ್ಣ ಬೈರೇಗೌಡ

■ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನದ ಮೊಸಳೆ ಹೊಸಹಳ್ಳಿಯಲ್ಲಿ ಗಣೇಶ ಮೆರವಣಿಗೆ ವೇಳೆ ನಡೆದ ಅಪಘಾತಕ್ಕೆ ಕೋಮು ಬಣ್ಣ ಬಳಿಯುವವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಶನಿವಾರ (ಸೆ.13) ಹಾಸನಕ್ಕೆ ಭೇಟಿ ಅಧಿಕಾರಿಗಳ ಸಭೆ ನಡೆಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ನಡೆದಿರುವ ದುರಂತ ನಿಜಕ್ಕೂ ದುರಾದೃಷ್ಟಕರ. ಟ್ರಕ್ ಚಾಲಕ ಭುವನೇಶ್ ಎಂಬಾತನ ನಿರ್ಲಕ್ಷ್ಯವೇ ಇದಕ್ಕೆ ಮುಖ್ಯ ಕಾರಣ. ಈಗಾಗಲೇ ಆತನ ವಿರುದ್ಧ ಗೋರೂರ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದು, ಪೊಲೀಸರು ವಶಕ್ಕೆ ಪಡೆದಿದ್ದಾರೆ. ಅಲ್ಲದೆ, ಜನರಿಂದ ತೀವ್ರ ಥಳಿತಕ್ಕೊಳಪಟ್ಟಿರುವ ಆತನಿಗೆ ಚಿಕಿತ್ಸೆ ನೀಡಲಾಗುತ್ತಿದೆ, ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.



ಟ್ರಕ್ ಚಾಲಕ ಓರ್ವ ಮುಸ್ಲಿಂ ಎಂಬ ರೀತಿಯಲ್ಲಿ ಬಿಂಬಿಸುತ್ತಾ ಕೆಲ ವಿಪಕ್ಷದವರು ಈ ಘಟನೆಗೆ ಕೋಮು ಬಣ್ಣ ನೀಡುತ್ತಿರುವುದೂ ಕಂಡು ಬಂದಿದೆ. ಸಮಾಜದಲ್ಲಿ ಅಶಾಂತಿಗೆ ಕಾರಣವಾಗುವ ಇಂತಹ ದುರ್ವರ್ತನೆಯೂ ಕೂಡ ಕಾನೂನು ರೀತಿಯ ಅಪರಾಧವಾಗಿದ್ದು, ಅಂತಹವರ ವಿರುದ್ಧವೂ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಈ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ ಎಂದು ತಿಳಿಸಿದರು.

ದುರಂತಕ್ಕೆ ರಸ್ತೆ ಸಮಸ್ಯೆಯೂ ಒಂದು ಕಾರಣ. ಈ ಭಾಗದಲ್ಲಿ ರಸ್ತೆಯನ್ನು ವೈಜ್ಞಾನಿಕವಾಗಿ ನಿರ್ಮಿಸಿಲ್ಲ. ಹೀಗಾಗಿ, ರಸ್ತೆಯನ್ನು ಮತ್ತಷ್ಟು ಅಗಲೀಕರಣ ಮಾಡಬೇಕು ಎಂಬ ಕೂಗೂ ಹಿಂದಿನಿಂದಲೂ ಕೇಳಿಬರುತ್ತಿದೆ. ಈ ಬಗ್ಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಸರ್ಕಾರದ ಪರವಾಗಿ ನಾನು ಮತ್ತು ಹಾಸನ ಜಿಲ್ಲೆ ಸಂಸದರಾದ ಶ್ರೇಯಸ್ ಎಂ ಪಾಟೀಲ್ ಪತ್ರ ಬರೆಯುತ್ತೇವೆ. ದುರಂತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವೂ ಪರಿಹಾರ ನೀಡಬೇಕಿದೆ. ಈ ಬಗ್ಗೆಯೂ ಪತ್ರದಲ್ಲಿ ಒತ್ತಾಯಿಸಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಹಾಸನ ತಾಲೂಕಿನ ಮೊಸಳೆ ಹೊಸಹಳ್ಳಿಯಲ್ಲಿ ಶುಕ್ರವಾರ (ಸೆ.12) ರಾತ್ರಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಸಂಭವಿಸಿದ ಭೀಕರ ಅಪಘಾತದಲ್ಲಿ ಮೂವರು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಸೇರಿ 9 ಮಂದಿ ಸಾವಿಗೀಡಾಗಿದ್ದು, 20ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

### ಲಯನ್ಸ್ ಕ್ಲಬ್‌ನಿಂದ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ ವಿತರಣೆ

# ಉತ್ತಮ ಬರವಣಿಗೆ ವ್ಯಕ್ತಿತ್ವವನ್ನು ರೂಪಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಸ್ಪಷ್ಟ ಓದು, ಶುದ್ಧ ಬರಹದಿಂದ ಜ್ಞಾನದ ಹರಿವು ವೃದ್ಧಿಸುತ್ತದೆ. ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಓದುವ ಹಾಗೂ ಬರೆಯುವ ಕೌಶಲ್ಯವನ್ನು ಪ್ರೋತ್ಸಾಹಿಸಲು ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಿಗೆ ಪ್ರೋತ್ಸಾಹದಾಯಕವಾಗಿ ಬರವಣಿಗೆಯ ಸಾಮಗ್ರಿಗಳನ್ನು ವಿತರಿಸಲಾಗುತ್ತಿದೆ. ಮಕ್ಕಳು ಇವುಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಹೇಳಿದರು.

ಅವರು ನಂದೀಶ್ವರ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ. 20ರಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನಿಂದ ಮಕ್ಕಳಿಗೆ ಕಲಿಕಾ ಸಾಮಗ್ರಿ ಹಾಗೂ ಸಿಹಿ ವಿತರಿಸಿ ಮಾತನಾಡಿದರು.

ಉತ್ತಮ ಬರವಣಿಗೆಯು ನಮ್ಮ ವ್ಯಕ್ತಿತ್ವವನ್ನು ರೂಪಿಸುತ್ತದೆ. ಓದುವ ಹವ್ಯಾಸ ನಮ್ಮ ಜ್ಞಾನದ ವಿಕಾಸವನ್ನು ಸುಗಮಗೊಳಿಸುತ್ತದೆ. ಮಕ್ಕಳು ಓದು-ಬರಹದಲ್ಲಿ ಪರಿಣಿತರಾಗಿ ಯಶಸ್ಸು ಸಾಧಿಸಬೇಕು ಎಂದರು.

ಪ್ರಾಯೋಕತ್ವ ವಹಿಸಿಕೊಂಡಿದ್ದ ಕ್ಲಬ್‌ನ ಖಜಾಂಚಿ ರೇಣುಕಪ್ರಸಾದ ಹಿರೇಮಠ ಮಕ್ಕಳಿಗೆ ಕಲಿಕಾ ಸಾಮಗ್ರಿ ಹಾಗೂ ಸಿಹಿ ವಿತರಿಸಿ ಮಾತನಾಡಿ, ಪ್ರತಿಭಾನ್ವಿತ ಸಾಧಕರು ಸರ್ಕಾರಿ ಶಾಲೆಗಳಲ್ಲಿಯೇ ಓದಿದವರಾಗಿದ್ದಾರೆ. ಸರ್ಕಾರ ನೀಡುವ ಉಚಿತ ಸೌಲಭ್ಯಗಳೊಂದಿಗೆ



ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಎನ್.ಎನ್. ತಹಸೀಲ್ದಾರ್ ಮಾತನಾಡಿ, ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗೆ ಭೇಟಿ ನೀಡಿ ಮಕ್ಕಳ ಜ್ಞಾನಾರ್ಜನೆಗೆ ಸಹಾಯ ನೀಡುತ್ತಿರುವುದಕ್ಕೆ ಅಭಿನಂದಿಸಿದರಲ್ಲದೆ, ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಜ್ಞಾನದ ಅರಿವನ್ನು ಮೂಡಿಸಿ, ಅವರನ್ನು ಉತ್ತಮ ವ್ಯಕ್ತಿಗಳಾಗಿ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ ಪ್ರೋತ್ಸಾಹ ನೀಡಬೇಕು ಎಂದರು. ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಅಧ್ಯಕ್ಷ ರಾಜು ವೇರ್ಣೇಕರ ಮಾತನಾಡಿ, ಮಕ್ಕಳು ಬಾಲ್ಯದಲ್ಲಿಯೇ ಉತ್ತಮ ಹವ್ಯಾಸ, ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಪ್ರತಿದಿನ ಶಾಲೆಗೆ ಬರುವುದು, ಉತ್ತಮ ಓದು-ಬರಹ ರೂಢಿಸಿಕೊಳ್ಳುವುದು ಒಳ್ಳೆಯ ಹವ್ಯಾಸಗಳು. ನಿರಂತರ ಓದಿನಿಂದ ಜೀವನದಲ್ಲಿ ಯಶಸ್ಸು ಸಾಧಿಸಬಹುದು. ಮಕ್ಕಳು ಸಾಧಕರನ್ನು ಮಾದರಿಯನ್ನಾಗಿಟ್ಟುಕೊಂಡು ಆದರ್ಶಮಯವಾದ ಬದುಕು ರೂಪಿಸಿಕೊಳ್ಳಬೇಕು ಎಂದರು.

ಗಾಳೆಮ್ಮ ಕುರ್ತಕೋಟಿ, ಭೂಮಿಕಾ ಶಿರಹಟ್ಟಿ ಪ್ರಾರ್ಥಿಸಿದರು. ರಮೇಶ ಶಿಗ್ಲಿ ಸ್ವಾಗತಿಸಿದರು. ಸುನಂದಾ ಇದ್ಲಿ ಪರಿಚಯಿಸಿದರು. ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ ನಿರೂಪಿಸಿದರು. ಖಜಾಂಚಿ ಸಹನಾ ಹಿರೇಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ನಿತೀಶ ಸಾಲಿ, ವೀರಣ್ಣ ಪಟ್ಟಣಶೆಟ್ಟಿ, ರಾಹುಲ ಅರಳಿ, ಡಾ. ಶಾಂತ ಕುಂಬಾರ ಲಯನ್ಸ್ ಕ್ಲಬ್ ಮಹಿಳಾ ಘಟಕದ ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಸಾವಿತ್ರಿ ಶಿಗ್ಲಿ, ಅಮೃತಾ ವಾರ್ಕರ, ಪೂಜಾ ಅರಳಿ ಮುಂತಾದವರು ಉಪಸ್ಥಿತರಿದ್ದರು.

# ತರಾತುರಿಯ ಗಣತಿ ಸಾಧುವಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಜಾತಿ ಸಮೀಕ್ಷೆಯ ವಿಷಯದಲ್ಲಿ ತರಾತುರಿಯಲ್ಲಿ ನಿರ್ಧಾರ ಕೈಗೊಳ್ಳದೆ, ಜನರಲ್ಲಿ ಇನ್ನಷ್ಟು ಜಾಗೃತಿ ಮೂಡಿಸಿ ಗಣತಿ ಪ್ರಾರಂಭಿಸಬೇಕೆಂದು ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಳ್ಳಿಗಳಲ್ಲಿ ಅತಿವೃಷ್ಟಿಯಿಂದ ಹಾಳಾದ ಬೆಳೆಗಳ ಕೊಯ್ಲು, ಹಿಂಗಾರಿಗೆ ಭೂಮಿ ಹದಗೊಳಿಸುವ ಕಾರ್ಯದಲ್ಲಿ ರೈತರು ನಿರತರಾಗಿರುವಾಗ ಸರ್ಕಾರ ಕೆಲವೇ ದಿನಗಳಲ್ಲಿ ಸಮೀಕ್ಷೆ ಮುಗಿಸುತ್ತೇವೆ ಎನ್ನುವದು ಸರಿಯಲ್ಲ. ರಾಜ್ಯದ ಸುಮಾರು 2 ಕೋಟಿ ಮನೆಗಳ ಸಮೀಕ್ಷೆ ಸುಲಭ ಸಾಧ್ಯವಲ್ಲ. ಹೀಗಾಗಿ, ಬೇಸಿಗೆ ಕಾಲದಲ್ಲಿ ಸಮೀಕ್ಷೆ ಮಾಡುವದು ಉತ್ತಮ ಎಂದಿದ್ದಾರೆ.

ಸರ್ಕಾರ ಹೊಸ ಜಾತಿಗಳನ್ನು ಸೃಷ್ಟಿ ಮಾಡಿರುವದು ದುರದೃಷ್ಟಕರ. ಸರಕಾರದ ಯಾವುದೇ ಜಾತಿ ಪಟ್ಟಿಯಲ್ಲಿ ಇಲ್ಲದ, ಯಾವ ಆಯೋಗದ ಜಾತಿ ಪಟ್ಟಿಯಲ್ಲಿ ಇಲ್ಲದ ಹೊಸ ಜಾತಿಗಳನ್ನು ಸೃಷ್ಟಿಸಿದ್ದಾರೆ. ಕುರುಬ ಕ್ರಿಶ್ಚಿಯನ್, ಮಡಿವಾಳ ಕ್ರಿಶ್ಚಿಯನ್, ಒಕ್ಕಲಿಗ ಕ್ರಿಶ್ಚಿಯನ್ ಈ ರೀತಿ 107 ಕಡೆಗಳಲ್ಲಿ ಹೊಸ ಜಾತಿಗಳನ್ನು ಪ್ರಕಟಿಸಿದ್ದಾರೆ. ಅವುಗಳಿಗೆ ಕೋಡ್ ನಂಬರ್ ನೀಡಿದ್ದು, ಇದನ್ನು ಯಾವುದೇ ಕಾರಣಕ್ಕೂ ಒಪ್ಪಲಾಗದು ಎಂದು ಆಕ್ಷೇಪಿಸಿದ್ದಾರೆ. ಸಮೀಕ್ಷೆಗೆ ಸ್ವೀಕೃತಿ ಪತ್ರವನ್ನು ಕಡ್ಡಾಯವಾಗಿ ಕೊಡಬೇಕು. ಕನ್ನಡದ ವ್ಯಾಕರಣ ಮಾಲೆ ಪ್ರಕಾರ 1,400 ಜಾತಿ ಪಟ್ಟಿ ಮಾಡದೆ ಪ್ರವರ್ಗ ಪ್ರಕಾರ ಮಾಡಬೇಕು. 15 ದಿನದಲ್ಲೇ ಸಮೀಕ್ಷೆ ಮಾಡುವ ಹಠಮಾರಿತನ, ತರಾತುರಿಯಲ್ಲಿ ಮಾಡುವ ಸಮೀಕ್ಷಾ ವರದಿ ಮತ್ತೊಮ್ಮೆ ತಿರಸ್ಕಾರ ಆಗುವಂತಾಗಬಾರದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

### ಕುಸಿತ ಕಂಡ ಬೆಳ್ಳುಳ್ಳಿ ದರ । ಎಪಿಎಂಸಿ ಯಾರ್ಡ್‌ನಲ್ಲಿ ರೈತರ ಅಸಮಾಧಾನ

# ರಸ್ತೆಗೆ ಬೆಳ್ಳುಳ್ಳಿ ಸುರಿದು ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಪಿಎಂಸಿ ಯಾರ್ಡ್ ಮಾರುಕಟ್ಟೆಯಲ್ಲಿ ಶನಿವಾರ ಬೆಳ್ಳುಳ್ಳಿ ದರ ತೀವ್ರ ಕುಸಿದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ರೈತರು ಮಾರುಕಟ್ಟೆಯ ರಸ್ತೆಯ ಮಧ್ಯೆ ಬೆಳ್ಳುಳ್ಳಿ ಸುರಿದು ಪ್ರತಿಭಟನೆ ನಡೆಸಿದರು.

ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಶನಿವಾರ ಎಂದಿನಂತೆ ರೈತರು ತಾವು ಬೆಳೆದಿದ್ದ ಬೆಳ್ಳುಳ್ಳಿ ಮಾರುಕಟ್ಟೆಗೆ ತಂದಿದ್ದು, ಕಳೆದ ವಾರಕ್ಕಿಂತಲೂ ದರ ಕುಸಿದಿದ್ದರಿಂದ, ಆಕ್ರೋಶಗೊಂಡ ರೈತರು ಬೆಳ್ಳುಳ್ಳಿಯನ್ನು ರಸ್ತೆಗೆ ಚೆಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಈ ಬಾರಿ ಮಳೆಯ ಹೊಡೆತಕ್ಕೆ ನಲುಗಿರುವ ಬೆಳ್ಳುಳ್ಳಿ ಅಪಾರ ಪ್ರಮಾಣದಲ್ಲಿ ನಷ್ಟವಾಗಿದೆ. ಇದೀಗ ಅಳಿದುಳಿದ ಬೆಳೆಗೂ ಬೆಲೆ ಇಲ್ಲದಂತಾಗಿದ್ದು, ಇದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.



ಅತಿಯಾದ ಮಳೆಯ ಹಿನ್ನೆಲೆಯಲ್ಲಿ ಬೆಳ್ಳುಳ್ಳಿಯ ಗುಣಮಟ್ಟ ಕಡಿಮೆಯಾಗಿದೆ ಎನ್ನುವ ದೃಷ್ಟಿಯಿಂದ ಖರೀದಿಗೆ ವ್ಯಾಪಾರಸ್ಥರು ಬಾರದೇ ಇರುವದರಿಂದ ಬೆಲೆ ಸಿಗುತ್ತಿಲ್ಲ ಎನ್ನಲಾಗುತ್ತಿದೆ. ಅಲ್ಲದೆ ದಲ್ಲಾಳಿಗಳು ಸಹ ಬೆಳೆ ತೆಗೆದುಕೊಳ್ಳಲಿಕ್ಕೆ ಹಿಂದೆ ಮುಂದೆ ನೋಡುತ್ತಿದ್ದಾರೆ. ಕಳೆದ ವಾರ ಬೆಳ್ಳುಳ್ಳಿ ದರ ಕ್ವಿಂಟಾಲ್‌ಗೆ 5000–7000 ರೂಗಳ ಧಾರಣೆ ಕಂಡಿದ್ದು, ಈ ವಾರ 3000–4000 ರೂಗಳಿಗೆ ಕುಸಿತ ಕಂಡಿದ್ದರಿಂದ ಆಕ್ರೋಶಗೊಂಡ ರೈತರು ಬೆಳ್ಳುಳ್ಳಿ ರಸ್ತೆಗೆ ಚೆಲ್ಲಿ ಪ್ರತಿಭಟನೆ ನಡೆಸಿದ್ದಾರೆ. ರೈತರ ಗೋಳಿಗೆ ಯಾರೂ ಸ್ಪಂದಿಸುತ್ತಿಲ್ಲ ಎಂದು ವ್ಯವಸ್ಥೆಯ ವಿರುದ್ಧ ಧಿಕ್ಕಾರ ಕೂಗಿದರು.

ಗದಗ, ಬಾಗಲಕೋಟೆ, ಹುಬ್ಬಳ್ಳಿ, ದಾವಣಗೆರೆ ಸೇರಿದಂತೆ ಬೇರೆ ಬೇರೆ ಜಿಲ್ಲೆಗಳಲ್ಲಿ ಬೆಳ್ಳುಳ್ಳಿಗೆ ಹೆಚ್ಚಿನ ಬೆಲೆ ನಿಗದಿಪಡಿಸಲಾಗಿದೆ. ಇಲ್ಲಿ ಮಾತ್ರ ಕಡಿಮೆ ದರವೇಕೆ ಎಂದು ರೈತ ಶಿವು ಕಡೆಮನಿ ಪ್ರಶ್ನಿಸಿದರು. ಕಳೆದ ವಾರ ಬೆಳ್ಳುಳ್ಳಿ ದರ ಸಮಾಧಾನಕರವಾಗಿತ್ತು. ಈಗ ಬೆಳ್ಳುಳ್ಳಿ ದರ ಇಳಿಸಲಾಗಿದೆ. ರೈತರಿಗೆ ನ್ಯಾಯ ಒದಗಿಸದಿದ್ದರೆ ಹೋರಾಟಕ್ಕೆ ಮುಂದಾಗುತ್ತೇವೆ ಎಂದು ರೈತರಾದ ಮಂಜುನಾಥ ಬೆಟಗೇರಿ, ಬಸವರಾಜ ಯಂಗಾಡಿ ಮತ್ತು ಪರಸುರಾಮ ಲಕ್ಕಣ್ಣವರ್ ಎಚ್ಚರಿಸಿದರು.

ಈಗಾಗಲೇ ರೈತರು ಮಳೆಯ ಹೊಡೆತಕ್ಕೆ ಕಂಗಾಲಾಗಿದ್ದಾರೆ. ಹೆಸರು ಬೆಳೆ ಹೇಳ ಹೆಸರಿಲ್ಲದಂತಾಗಿ ರೈತರಿಗೆ ಗಾಯ ಮಾಡಿತ್ತು. ಅಲ್ಲದೆ ಬೆಳ್ಳುಳ್ಳಿ ಬೆಳೆ ಶೇ.80ರಷ್ಟು ಹಾಳಾಗಿದೆ. ಉಳಿದ ಶೇ.10–20ರಷ್ಟು ಇರುವ ಬೆಳೆಗೂ ಸಹ ಬೆಲೆ ಇಲ್ಲದಿದ್ದರೆ ರೈತರು ಬದುಕುವದಾದರೂ ಹೇಗೆ? ಬೆಲೆ ಕಡಿಮೆಯಾಗಿದೆಯಾದರೂ, ಅತಿ ಕನಿಷ್ಠ ದರಕ್ಕೆ ಮಾರಾಟ ಮಾಡುವದು ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗುತ್ತದೆ ಎಂದು ರೈತರಾದ ಶ್ರೀನಾಥ ಗೋಂದಿ, ಪರಶುರಾಮ ಲಕ್ಕಣ್ಣವರ ಹೇಳಿದರು.

ರೈತರಾದ ರಮೇಶ ಪೂಜಾರ, ಸಾದೇವಪ್ಪ ಜುಲ್ಪಿ, ಬಸವರಾಜ ಬೆಳವಣಿಕಿ, ಶಿವಾನಂದ ಗುಮ್ಮಗೋಳ, ನಿಂಗರಾಜ ಬಿಜಗತ್ತಿ, ಆದಿತ್ಯ ಹದ್ದಣ್ಣವರ, ಹನುಮಂತ ಪೂಜಾರ ಸೇರಿದಂತೆ ಅನೇಕ ರೈತರಿದ್ದರು.

ವಿಷಯ ತಿಳಿಯುತ್ತಿದ್ದಂತೆ ಎಪಿಎಂಸಿ ಕಾರ್ಯದರ್ಶಿ ರುದ್ರಗೌಡ ಪಾಟೀಲ್ ಸ್ಥಳಕ್ಕೆ ಧಾವಿಸಿ, ಮೊದಲು ರೈತರು ತಂದ ಮಾಲನ್ನು ಇಳಿಸಿಕೊಳ್ಳಿ ಎಂದು ದಲ್ಲಾಲಿಗಳಿಗೆ ಸೂಚಿಸಿದರು. ಈ ವೇಳೆ ಕೆಲಹೊತ್ತು ರೈತರ ಮತ್ತು ದಲ್ಲಾಲಿಗಳ ನಡುವೆ ಮಾತಿನ ಚಕಮಕಿ ನಡೆಯಿತು. ಗದ್ದಲದ ವಾತಾವರಣ ತಿಳಿಯಾಗುತ್ತಿದಂತೆ ಮತ್ತೆ ಹರಾಜು ಪ್ರಕ್ರಿಯೆ ಪ್ರಾರಂಭವಾಯಿತು.

# ಸ್ಪರ್ಧಾತ್ಮಕ ಪರೀಕ್ಷಾ ಸಿದ್ಧತೆಯ ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನಲ್ಲಿ ವಾಣಿಜ್ಯ ವಿಭಾಗದಿಂದ ಸ್ಪರ್ಧಾತ್ಮಕ ಪರೀಕ್ಷಾ ಸಿದ್ಧತೆಯ ಒಂದು ದಿನದ ಕಾರ್ಯಾಗಾರ ನಡೆಯಿತು.

ಕಾರ್ಯಾಗಾರವನ್ನು ಧಾರವಾಡದ ಚಾಣಕ್ಯ ಕರಿಯರ್ ಅಕಾಡೆಮಿಯ ನಿರ್ದೇಶಕ ಪ್ರದೀಪ ಗಡ್ಡದ ಉದ್ಘಾಟಿಸಿ, ಪರೀಕ್ಷಾ ಸಿದ್ಧತೆ ಕುರಿತು ಮಾತನಾಡಿ, ಐಎಎಸ್, ಐಪಿಎಸ್, ಕೆಎಎಸ್, ಪಿಎಸ್ಐ, ಎಫ್‌ಡಿಎ ಪರೀಕ್ಷೆಗಳಿಗೆ ವಿದ್ಯಾರ್ಥಿಗಳ ಸಿದ್ಧತೆ ಹೇಗಿರಬೇಕು ಎಂಬುದನ್ನು ವಿವರವಾಗಿ ತಿಳಿಸಿದರು. ಕಷ್ಟ ಏನೇ ಬರಲಿ, ಫಲಿತಾಂಶ ಏನೇ ಆಗಲಿ ನಾನು ಈ ಪರೀಕ್ಷೆಯಲ್ಲಿ ಒಂದಲ್ಲ ಒಂದು ದಿನ ಗುರಿ ಮುಟ್ಟಿಯೇ ತೀರುತ್ತೇನೆ ಎನ್ನುವ ದೃಢ ನಿರ್ಧಾರ ನಿಮ್ಮದಾದರೆ ನಿಮ್ಮ ಕನಸು ನನಸಾಗುತ್ತದೆ ಎಂದು ತಿಳಿಸಿದರು. ಯಾವ ಪುಸ್ತಕಗಳನ್ನು ಓದಬೇಕು, ಹೇಗೆ ಓದಬೇಕು, ಲೇಖಕರು ಯಾರು ಎಂಬುದನ್ನೆಲ್ಲ ಮೊದಲಿಗೆ ಸರಿಯಾಗಿ ತಿಳಿದುಕೊಳ್ಳಬೇಕು. ಇದನ್ನು ಸಾಧಿಸಬೇಕಾದರೆ ನಿಮ್ಮಲ್ಲಿ ಸಮಯಪ್ರಜ್ಞೆ, ತಾಳ್ಮೆ, ಸತತ ಅಧ್ಯಯನ, ಮಾರ್ಗದರ್ಶನ, ಸೂಕ್ತ ಕೋಚಿಂಗ್‌ನ್ನು ಪಡೆದುಕೊಳ್ಳಬೇಕೆಂದರು.

ಪವನ ಮಾಸರೆಡ್ಡಿ ಮಾತನಾಡಿ, ಡಿಜಿಟಲ್ ಗ್ರಂಥಾಲಯದ ಬಳಕೆ, ಸಮರ್ಪಕವಾದ ವಿಷಯ ಸಂಗ್ರಹಣೆ, ಬ್ಯಾಂಕ್ ಮತ್ತು ಆರ್‌ಆರ್‌ಬಿ ಪರೀಕ್ಷೆಗಳ ಸಿದ್ಧತೆಯನ್ನು ಹೇಗೆ ಮಾಡಬೇಕೆಂಬುದನ್ನು ಅನೇಕ ಪ್ರಾತ್ಯಕ್ಷಿಕೆಗಳ ಮೂಲಕ ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಮಾತನಾಡಿ, ಈ ಒಂದು ದಿನದ ಕಾರ್ಯಾಗಾರ ನಿಮ್ಮನ್ನು ಸ್ಪರ್ಧಾತ್ಮಕ ಪರೀಕ್ಷೆಗೆ ಸರಿಯಾಗಿ ತಯಾರು ಮಾಡಿದೆ ಎಂದುಕೊಳ್ಳುತ್ತೇವೆ. ನಿಮಗೆ ಇನ್ನೂ ಏನಾದರೂ ಸಂಶಯಗಳಿದ್ದರೆ ಪ್ರಾಧ್ಯಾಪಕರನ್ನು ಸಂಪರ್ಕಿಸಿ, ಅವರು ವಿಷಯ ಸಂಪನ್ಮೂಲ ವ್ಯಕ್ತಿಗಳನ್ನು ಸಂಪರ್ಕಿಸಿ ನಿಮ್ಮ ಸಂದೇಹಗಳಿಗೆ ಉತ್ತರ ನೀಡುತ್ತಾರೆ ಎಂದು ತಿಳಿಸಿದರು.

ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಡಾ. ಎಸ್.ಎ. ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ವಾಣಿಜ್ಯ ವಿಭಾಗದ ಮುಖ್ಯಸ್ಥ ಡಾ. ಸಿ.ಎಸ್. ರವಿ, ಡಾ. ರತ್ನಾ ಪಾಟೀಲ, ಡಾ. ಎಂ.ಆರ್. ಶಿವರಾಮ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ತಂದೆ-ತಾಯಿ, ಗುರುಗಳು ಸಾಕ್ಷಾತ್ ದೇವರು



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಂದೆ–ತಾಯಿ, ಗುರುಗಳು ಸಾಕ್ಷಾತ್ ದೇವರು ಎಂದು ಧಾರವಾಡ ಅಪರ ಆಯುಕ್ತರ ಕಛೇರಿಯ ಯೋಜನಾ ಸಹಾಯಕ ಪ್ರವೀಣ ಬಿರಾದಾರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಗೆ ಅಗತ್ಯವಿರುವ ಪ್ರಿಂಟರ್, ಸಿಪಿಯು, ಮಾನಿಟರ್ ದೇಣಿಗೆ ನೀಡಿ ಮಾತನಾಡಿದರು.

ಸರಕಾರಿ ಶಾಲೆಗಳಲ್ಲಿ ಬಡ ಮಕ್ಕಳು ಅಭ್ಯಾಸ ಮಾಡುತ್ತಿದ್ದು, ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಹಾಯ ಸಹಕಾರ ಅಗತ್ಯವಿದೆ. ನಮ್ಮ ದುಡಿಮೆಯ ಸ್ವಲ್ಪ ಭಾಗವಾದರೂ ಸಮಾಜದ ಒಳತಿಗಾಗಿ ಮೀಸಲಿಡಬೇಕು. ಮಕ್ಕಳು ನಿತ್ಯ ತಂದೆ–ತಾಯಿ, ಗುರುಗಳನ್ನು ಸಾಕ್ಷಾತ್ ದೇವರಂತೆ ಕಾಣಬೇಕು. ಸರಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕ ವೃಂದ ಇರುವುದರಿಂದ ಮಕ್ಕಳು ಗುರುಗಳು, ತಂದೆ–ತಾಯಿಗಳು ನೀಡುವ ಸಂಸ್ಕಾರ, ಮೌಲ್ಯಯುತ ಮಾತುಗಳನ್ನು ನಿತ್ಯ ಬದುಕಿನಲ್ಲಿ ಅಳವಡಿಸಿಕೊಂಡು ಸಾಗಿದಾಗ ಬದುಕು ಸುಂದರವಾಗುತ್ತದೆ ಎಂದರು.

ಶಾಲಾ ಪ್ರಧಾನ ಗುರು ಎಸ್.ಎಚ್. ಪುಜಾರ, ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ, ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಚ್. ಮಾನೇಗಾರ, ನೂರಹ್ಮದ ನದಾಫ್, ಎಸ್.ವಿ. ತಿಮ್ಮಾಪೂರ, ವಿ.ಟಿ. ಅಂಗಡಿ, ಬಸವರಾಜ ಗೌರಿಮನಿ ಇದ್ದರು.

# ರಾಜ್ಯ ಮಟ್ಟದ 'ಉತ್ತಮ ಶಿಕ್ಷಕ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಬಸವರಾಜ ಎಂ.ಯರಗುಪ್ಪಿ ಹಾಗೂ ಹರದಗಟ್ಟಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿರುವ ಪಿ.ವಾಯ್. ಮ್ಯಾಗೇರಿ ಅವರು ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ರಾಜ್ಯ ಘಟಕ ಹೊಳೆಆಲೂರ ಅವರ ವತಿಯಿಂದ ಕೊಡಮಾಡುವ 2025–26ನೇ ಸಾಲಿನ ಶಿಕ್ಷಣ ಕ್ಷೇತ್ರದ ವಿಶೇಷ ವ್ಯಕ್ತಿಗಳ ವಿಭಾಗದಲ್ಲಿ ರಾಜ್ಯ ಮಟ್ಟದ 'ಉತ್ತಮ ಶಿಕ್ಷಕ' ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಬಸವರಾಜ ಯರಗುಪ್ಪಿ ಅನೇಕ ಪುನಶ್ಚೇತನ ತರಬೇತಿಗಳಲ್ಲಿ ಸಂಪನ್ಮೂಲ ಶಿಕ್ಷಕರಾಗಿ ಕಾರ್ಯ ನಿರ್ವಹಿಸುವ ಮೂಲಕ ಶಿಕ್ಷಕರಿಗೆ ಮಾರ್ಗದರ್ಶನ ಮಾಡಿದ ಹೆಗ್ಗಳಿಕೆ ಹೊಂದಿದ್ದಾರೆ. ಅವರ ಎಲ್ಲ ಕಾರ್ಯಗಳನ್ನು ಪರಿಗಣಿಸಿ ಅವರನ್ನು ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.





ತಾಲೂಕಿನ ಹರದಗಟ್ಟಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಪಿ.ವಾಯ್. ಮ್ಯಾಗೇರಿ ಅವರಿಗೂ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಲಭಿಸಿದ್ದು, ಸೆ.14ರಂದು ಗಜೇಂದ್ರಗಡದ ಶ್ರೀ ಅನ್ನದಾನೇಶ್ವರ ಸಭಾಭವನ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವದು.

ಪ್ರಶಸ್ತಿ ಪುರಸ್ಕೃತರಿಗೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಸವರಾಜ ಹರ್ಲಾಪುರ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ ಸೇರಿದಂತೆ ಪದಾಧಿಕಾರಿಗಳು, ಶಿಕ್ಷಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ಮೃತರ ಕುಟುಂಬಗಳಿಗೆ ನಷ್ಟ ಭರಿಸಲು ಆಗಲ್ಲ, ಸ್ವಲ್ಪ ಸಹಾಯ ಮಾಡಬಹುದಷ್ಟೆ; ಕೃಷ್ಣಬೈರೇಗೌಡ

■ವಿಜಯಸಾಕ್ಷಿ ಸುದ್ದಿ, ಹಾಸನ

ಮೃತರ ಕುಟುಂಬಗಳಿಗೆ ನಷ್ಟ ಭರಿಸಲು ಆಗಲ್ಲ, ಸ್ವಲ್ಪ ಸಹಾಯ ಮಾಡಬಹುದಷ್ಟೆ ಎಂದು ಸಚಿವ ಕೃಷ್ಣಬೈರೇಗೌಡ ಹೇಳಿದ್ದಾರೆ.

ಹಾಸನದಲ್ಲಿ ಸಂಭವಿಸಿದ ಭೀಕರ ಅಪಘಾತ ಸ್ಥಳಕ್ಕೆ ಭೇಟಿ ನೀಡಿ ಅವರು ಮಾತನಾಡಿದರು. ಅವಘಡದಲ್ಲಿ ಈವರೆಗೆ 9 ಜನ ಸಾವನ್ನಪ್ಪಿದ್ದಾರೆ. ಮೃತರ ಕುಟುಂಬಗಳಿಗೆ ಸರ್ಕಾರದ ಪರವಾಗಿ ಸಾಂತ್ವನ ಹೇಳಿದ್ದೇನೆ. ಆ ಕುಟುಂಬದ ನೋವು ಅರ್ಥ ಮಾಡಿಕೊಳ್ಳೋದು ಕಷ್ಟ. ಮೃತರ ಕುಟುಂಬಗಳಿಗೆ ನಷ್ಟ ಭರಿಸಲು ಆಗಲ್ಲ, ಹೀಗಾಗಿ ಸ್ವಲ್ಪ ಸಹಾಯದ ರೀತಿಯಲ್ಲಿ ಪರಿಹಾರ ನೀಡಿದ್ದೇವೆ. ತಲಾ 5 ಲಕ್ಷ ರೂ. ಪರಿಹಾರ ಕೊಡುವಂತೆ ಸಿಎಂ ಸೂಚಿಸಿದ್ದಾರೆ. ಅದರಂತೆ ನಾನು 5 ಲಕ್ಷ ರೂ. ಪರಿಹಾರ ಕೊಡುತ್ತಿದ್ದೇನೆ. ಇನ್ನೂ ಹೆಚ್ಚಿನ ಪರಿಹಾರ ಕೇಳುತ್ತಿದ್ದಾರೆ. ಅದರ ಬಗ್ಗೆ ಸಿಎಂ ಜೊತೆ ಮಾತನಾಡುತ್ತೇನೆ ಎಂದು ತಿಳಿಸಿದ್ದಾರೆ.

ಇನ್ನೂ ಇದು ಯಾರ ವೈಫಲ್ಯ ಎಂದು ಹೇಳೋಕ್ಕಾಗಲ್ಲ. ಹೆಚ್ಚಿನ ಭದ್ರತೆ ನೀಡಿದರೆ ಜನರ ಭಾವನೆಗಳಿಗೆ ಧಕ್ಕೆ ಎನ್ನುತ್ತೀರಾ, ಭದ್ರತೆ ಕಡಿಮೆ ಮಾಡಿದಾಗ ಏನಾದರೂ ಆದರೆ ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಂಡಿಲ್ಲ ಎನ್ನುತ್ತೀರಾ. ಹೀಗಾಗಿ ವೈಫಲ್ಯದ ಬಗ್ಗೆ ನಾನು ಮಾತಾಡಲ್ಲ. ಈಗಾಗಲೇ ಟ್ರಕ್ ಚಾಲಕನನ್ನು ಬಂಧಿಸಿದ್ದೇವೆ. ಆತ ಇದೇ ಊರಿನವನು, ಅವನಿಗೂ ಗಾಯ ಆಗಿದೆ. ಚಿಕಿತ್ಸೆ ನೀಡಲಾಗುತ್ತಿದೆ. ಸ್ಥಳಕ್ಕೆ ಭೇಟಿ ನೀಡುವ ಮುನ್ನ ಅಧಿಕಾರಿಗಳ ಜೊತೆ ಸಭೆ ಮಾಡಿದ್ದೇನೆ. ಸ್ಥಳ ಪರಿಶೀಲನೆ ಕೂಡ ಮಾಡಿದ್ದೇನೆ.



ಗದಗ ನಗರದ ಹಿದಾಯತ್ & ಜೆ.ಯು ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ಆಚರಿಸಲಾಯಿತು. ಈ ಸಂರ್ಭದಲ್ಲಿ 35 ವರ್ಷ ಸರ್ಕಾರಿ ಸೇವೆ ಸಲ್ಲಿಸಿ ನಿವೃತ್ತರಾದ ಧರ್ಮದರ್ಶಿ ವೇದಮೂರ್ತಿ ಮಹೇಶ್ವರಸ್ವಾಮೀಜಿ ಮತ್ತು ಅವರ ಶ್ರೀಮತಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂರ್ಭದಲ್ಲಿ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಜುನ್ಯೆದ್ ಉಮಚಗಿ, ಕಾರ್ಯದರ್ಶಿ ಜನಾಬ ಕೆ.ಐ. ಶೇಖ್, ಮುಖ್ಯ ಗುರುಮಾತೆ ಪಿ.ಬಿ. ಗುದಗಿ, ಎಲ್ಲ ಶಿಕ್ಷಕಿಯರು ಉಪಸ್ಥಿತರಿದ್ದರು.

### ಶಿವಸಂಗಮ ಸಹಕಾರಿ ಸಂಘದ ವಾರ್ಷಿಕ ಸಭೆ, ಸಾಧಕರಿಗೆ ಸನ್ಮಾನ

# ವಿದ್ಯಾವಂತರು ಕೃಷಿಯಲ್ಲಿ ಸಾಧನೆ ಮಾಡಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಯುವ ಜನಾಂಗ ಎಷ್ಟೇ ಶಿಕ್ಷಣ ಪಡೆದರೂ ಕೃಷಿಗೆ ಹೆಚ್ಚು ಒತ್ತು ನೀಡಬೇಕು. ಭೂಮಿತಾಯಿ ನಂಬಿದವರನ್ನು ಕೈಬಿಡುವುದಿಲ್ಲ, ಕೃಷಿಯಲ್ಲಿ ಆಧುನಿಕತೆ ಮತ್ತು ಸಾವಯವ ಪದ್ಧತಿಯನ್ನು ಅನುಸರಿಸುವ ಮೂಲಕ ಕೃಷಿಯಲ್ಲೂ ಅತ್ಯುನ್ನತ ಸಾಧನೆ ಆರ್ಥಿಕ ಸ್ವಾವಲಂಬನೆ ಸಾಧಿಸಲು ಸಾಧ್ಯವಿದೆ ಎಂದು ಮುಂಡರಗಿಯ ಪ್ರಗತಿಪರ ರೈತ, ಕೃಷಿ ಪಂಡಿತ ಪುರಸ್ಕೃತರಾದ ಈಶ್ವರಪ್ಪ ಹಂಚಿನಾಳ ಹೇಳಿದರು.

ಅವರು ಶನಿವಾರ ನಗರದ ಉಷಾದೇವಿ ಗೋವಿಂದರಾಜ ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ 11ನೇ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.



ಸಾಧಕರು ಮನಸ್ಸು ಮಾಡಿದರೆ ಬರಡು ಭೂಮಿಯಲ್ಲೂ ಬಂಗಾರದಂತಹ ಬೆಳೆ ತೆಗೆಯಲು ಸಾಧ್ಯವಿದೆ. ಭೂಮಿಯಲ್ಲಿ ಅಮೃತವೂ ಇದೆ, ವಿಷವೂ ಇದೆ. ಯುವಕರು ಕೃಷಿಗೆ ಮಹತ್ವ ನೀಡದಿದ್ದಲ್ಲಿ ಬರಲಿರುವ ದಿನಗಳಲ್ಲಿ ಆಹಾರ ಧಾನ್ಯಕ್ಕಾಗಿ ಕಾಯ್ದಿರಿಸುವ, ಪರಿತಪಿಸುವ ಕಾಲ ಬಂದೀತು. ಭಾರತ, ಕರ್ನಾಟಕದ ಫಲವತ್ತಾದ ಭೂಮಿಯಲ್ಲಿ ಕೃಷಿ ಸಾಧನೆಗೆ ಹೆಚ್ಚಿನ ಅವಕಾಶವಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ರಾಷ್ಟ್ರಪತಿ ಪದಕ ಪುರಸ್ಕೃತರಾದ ಪಿಎಸ್ಐ ಮಾರುತಿ ಜೋಗದಂಡಕರ ಹಾಗೂ ಗುರುರಾಜ ಬೂದಿಹಾಳ, ಪೊಲೀಸ್ ಇಲಾಖೆ ಜನಸ್ನೇಹಿಯಾಗಿ ಕೆಲಸ ಮಾಡುತ್ತಿದ್ದು, ಅಪರಾಧಗಳು ಕಡಿಮೆಯಾಗಲು ಸಾರ್ವಜನಿಕರು ಇಲಾಖೆಯೊಂದಿಗೆ ಸಹಕರಿಸಬೇಕು ಎಂದರು.

ರೋಟರಿ ಕ್ಲಬ್‌ನ ಅಧ್ಯಕ್ಷ ಡಾ. ರಾಜಶೇಖರ ಗಚ್ಚಿನಮಠ, ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಮಾತನಾಡಿದರು.

ಸಮಾರಂಭದಲ್ಲಿ ಸಾಧಕರಾದ ಪಾರ್ವತಮ್ಮ ಶಾಬಾದಿಮಠ, ಪೂರ್ಣಿಮಾ ಆಟದ, ಶಶಿಧರ ಅಮಾತ್ಯ, ವಿಶ್ವ ಕವಲೂರ, ವಿಜಯ ವಸ್ತ್ರದ, ಮಧುಮತಿ ಕರ್ಜಗಿ, ಮಲ್ಲಿಕಾರ್ಜುನ ಚಕ್ರಸಾಲಿ, ಪ್ರಕಾಶಗೌಡ ಪಾಟೀಲ, ಪ್ರಕಾಶ ಪಲ್ಲೇದ, ರಾಜು ಗುಡಿಮನಿ, ಗಾಯತ್ರಿ ಹಳ್ಳಿ, ಕೆ.ವ್ಹಿ. ಕರವೀರಮಠ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.


ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ ಮಾತನಾಡಿ, ಶಿವಸಂಗಮ ಎಲ್ಲ ಜನಾಂಗವನ್ನು ಒಳಗೊಂಡ, ಎಲ್ಲ ಜನಾಂಗಕ್ಕೂ ಆರ್ಥಿಕ ನೆರವು ನೀಡುವ ಸಂಸ್ಥೆಯಾಗಿದೆ. ಗ್ರಾಹಕರು ಸಂಸ್ಥೆಯ ಮೇಲೆ ವಿಶ್ವಾಸ ಇಟ್ಟಿದ್ದಾರೆ. ಅವರು ಸರಿಯಾಗಿ ಸಾಲದ ಮರುಪಾವತಿ ಮಾಡಿದ್ದರ ಪರಿಣಾಮವಾಗಿ ಸಂಸ್ಥೆ ಇಂದು ಗ್ರಾಹಕರ, ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ವೀರಯ್ಯ ಶಿವಕಾಳಿಮಠ ಮಾತನಾಡಿ, ವರ್ಷದಿಂದ ವರ್ಷಕ್ಕೆ ಪ್ರಗತಿ ಹೊಂದುತ್ತಿರುವ ಸಂಸ್ಥೆಯು 2025ನೇ ಸಾಲಿನಲ್ಲಿ 52 ಲಕ್ಷ 27 ಸಾವಿರ ರೂ.ಗಳ ನಿವ್ವಳ ಲಾಭವನ್ನು ಪಡೆದಿದ್ದು, ಶೇರುದಾರರಿಗೆ ಶೇ. 12ರಷ್ಟು ಡಿವ್ಹಿಡೆಂಡ್ ನೀಡಲಿದೆ ಎಂದರು.

ವೇದಿಕೆಯ ಮೇಲೆ ನಿರ್ದೇಶಕರಾದ ಎಂ.ಬಿ. ಲಿಂಗದಾಳ, ಗೀತಾ ಪಲ್ಲೇದ, ಸರೋಜಾ ಲಿಂಗದಾಳ, ಶೋಭಾ ಶಿವಕಾಳಿಮಠ, ಕವಿತಾ ದೇಸಾಯಿಮಠ, ಕಳಕಪ್ಪ ನಾಗರಾಳ, ಸುರೇಶ ಸರ್ವಿ ಉಪಸ್ಥಿತರಿದ್ದರು. ಸೌಹಾರ್ದ ನಿರ್ದೇಶಕ ಗಿರಿಯಪ್ಪ ಗಾಣಿಗೇರ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ಗೌರಮ್ಮ ಕಟ್ಟಿಮನಿ ಹಾಗೂ ವೀರೇಶ್ವರ ಪುಣ್ಯಾಶ್ರಮದ ವಿದ್ಯಾರ್ಥಿಗಳಿಂದ ಪ್ರಾರ್ಥನೆ ಜರುಗಿತು. ನಿರ್ದೇಶಕ ಪಿ.ಜೆ. ದೇಸಾಯಿಮಠ ಸ್ವಾಗತಿಸಿದರು. ವ್ಯವಸ್ಥಾಪಕ ಎಂ.ಎಂ. ಬಡಿಗೇರ ಜಮಾ–ಖರ್ಚು ಹಾಗೂ ಲಾಭ–ಹಾನಿ ಪತ್ರಿಕೆ ಸಾದರಪಡಿಸಿದರು. ಟಿ.ವಿ. ಸಂಶಿ ಅಢಾವೆ ಪತ್ರಿಕೆ ಮಂಡಿಸಿದರು. ನಿರ್ದೇಶಕ ಎಂ.ಜಿ. ಗಾಣಿಗೇರ ವಂದಿಸಿದರು.

ಧಾರವಾಡ ಕೆಎಂಎಫ್ ನಿರ್ದೇಶಕ ಹೆಚ್.ಜಿ. ಹಿರೇಗೌಡ್ರ ಮಾತನಾಡಿ, ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘ ಆರ್ಥಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದೆ. ಗ್ರಾಹಕರ ವಿಶ್ವಾಸವನ್ನು ಪಡೆದಿರುವ ಶಿವಸಂಗಮ ಬ್ಯಾಂಕ್ ಆಗಿ ಪರಿವರ್ತನೆ ಹೊಂದುವ ಎಲ್ಲ ಅರ್ಹತೆಗಳನ್ನು ಪಡೆದಿದೆ ಎಂದರು.

# ಸಂಘದ ಬೆಳವಣಿಗೆಗೆ ಸದಸ್ಯರ ಸಹಕಾರ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಹಕಾರಿ ಸಂಘಗಳ ಅಭಿವೃದ್ಧಿಗೆ ಸರ್ವ ಸದಸ್ಯರ ಸಹಕಾರ ಅಗತ್ಯವಿದೆ ಎಂದು ಮುಳಗುಂದ ವಿಭಾಗದ ಪ್ರಾಥಮಿಕ ಶಿಕ್ಷಕರ ಪತ್ತು ಬೆಳೆಸುವ ಸಹಕಾರಿ ಸಂಘದ ಅಧ್ಯಕ್ಷ ಎಂ.ಎಂ. ಮೇಗಲಮನಿ ಹೇಳಿದರು.

ಅವರು ಪಟ್ಟಣದ ಸಹಕಾರಿ ಸಂಘದ 53ನೇ ವಾರ್ಷಿಕ ಸರ್ವ ಸಾಧಾರಣಾ ಸಭೆಯಲ್ಲಿ ನಿವೃತ್ತ ಶಿಕ್ಷಕ ಎಂ.ಸಿ. ಮುರಘಿಮಠ ಅವರನ್ನು ಸನ್ಮಾನಿಸಿ ಮಾತನಾಡಿ, ಹಲವಾರು ಶಿಕ್ಷಕರು ಈ ಸಹಕಾರಿ ಸಂಘವನ್ನು ಕಟ್ಟಿ ಬೆಳೆಸಿದ್ದಾರೆ. ಅದರ ಫಲವಾಗಿ ಇಂದು ಸಂಘವು ಬೆಳೆದು ಹೆಮ್ಮರವಾಗಿ ಬೆಳೆದು ಶಿಕ್ಷಕರ ಆರ್ಥಿಕವಾಗಿ ಸದೃಢರಾಗಲು ಸಹಕಾರಿಯಾಗಿದೆ. ಈ ಸಹಕಾರಿ ಸಂಘವು ಮತ್ತಷ್ಟು ಅಭಿವೃದ್ಧಿ ಹೊಂದಲು ಎಲ್ಲಾ ಸದಸ್ಯರ ಸಹಕಾರ ಅಗತ್ಯವಿದೆ ಎಂದರು.

ಎಸ್.ಎ. ಶ್ಯಾಗೋಟಿ, ಪಿ.ಬಿ. ಕೆಂಚನಗೌಡರ, ಬಿ.ವಿ. ಹುಡೇದ, ಎಸ್.ಎಂ. ನವಲಿ, ಬಿ.ವಿ. ಚಕ್ರಸಾಲಿ, ಎಸ್.ಎಂ. ಉಜ್ಜಣ್ಣವರ, ಸುಧಾ ಮಡ್ಡಕಾರ ಹಾಗೂ ಸಂಘದ ಸರ್ವ ಸದಸ್ಯರು ಇದ್ದರು.

## ಕೆಎಲ್‌ಇ ಶಾಲೆಗೆ 'ಅತ್ಯುತ್ತಮ ಶಾಲೆ' ಗೌರವ



■ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಶಿಕ್ಷಣದ ಗುಣಮಟ್ಟ ಮತ್ತು ಮೌಲ್ಯಾಂಕನ ಅಂಶಗಳನ್ನು ಒಳಗೊಂಡಂತೆ ರಾಷ್ಟ್ರದಾದ್ಯಂತ ಸರ್ಕಾರಿ ಮತ್ತು ಖಾಸಗಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಸಮೀಕ್ಷೆ ನಡೆಸಿ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಆಧರಿಸಿ ಉತ್ತಮ ಶಾಲೆಗಳೆಂದು ನಿರ್ಧರಿಸುವ ಸೀ ಫೋರ್ ಸಂಸ್ಥೆಯು ಗದಗ ನಗರದ ಕೆಎಲ್‌ಇ ಸಂಸ್ಥೆಯ ಶಾಲೆಯನ್ನು ಗದಗ ಜಿಲ್ಲೆಯಲ್ಲಿಯೇ ಅತ್ಯುತ್ತಮ ಪ್ರಥಮ ಶಾಲೆ ಮತ್ತು ಕರ್ನಾಟಕ ರಾಜ್ಯದಲ್ಲಿ 56ನೇ ಸ್ಥಾನವನ್ನು ನೀಡಿ ಗೌರವಿಸಿದೆ.

ಸದರಿ ಸಾಧನೆಯ ಪ್ರಶಸ್ತಿ ಫಲಕಗಳನ್ನು ನವದೆಹಲಿಯ ಸೀ ಫೋರ್ ಸಂಸ್ಥೆಯ ಕಚೇರಿಯಲ್ಲಿ ಶಾಲೆಯ ಪ್ರಾಂಶುಪಾಲರಾದ ಕಲ್ಪನಾ ಚಚಡಿ ಸ್ವೀಕರಿಸಿದರು. ಈ ಸಾಧನೆಗೆ ಸಹಕರಿಸಿದ ಸಂಸ್ಥೆಯ ಕಾರ್ಯಾಧ್ಯಕ್ಷರು ಮತ್ತು ಆಡಳಿತ ಮಂಡಳಿ, ಶಾಲೆಯ ಪಾಲಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳಿಗೆ ಶಾಲೆಯ ಮುಖ್ಯಸ್ಥರು ಧನ್ಯವಾದಗಳನ್ನು ತಿಳಿಸಿದ್ದಾರೆ.

### ಸಭಾಪತಿ ಬಸವರಾಜ ಹೊರಟ್ಟಿ ಅಧ್ಯಕ್ಷತೆಯಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಸಭೆ

# ಶೈಕ್ಷಣಿಕ ಸಮಸ್ಯೆಗಳ ಪರಿಹಾರಕ್ಕೆ ಸೂಚನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಉನ್ನತ ಶಿಕ್ಷಣ ಇಲಾಖೆಯ ವಿವಿಧ ಸಮಸ್ಯೆಗಳ ಕುರಿತು ಚರ್ಚಿಸಲು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ವಿಧಾನ ಸೌಧದಲ್ಲಿ ಶನಿವಾರ ಶಿಕ್ಷಕ ಮತ್ತು ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಸದಸ್ಯರ ಸಮ್ಮುಖದಲ್ಲಿ ಉನ್ನತ ಶಿಕ್ಷಣ ಇಲಾಖೆಯ ಸಚಿವ ಡಾ. ಎಂ.ಸಿ. ಸುಧಾಕರ್ ಅವರೊಂದಿಗೆ ಸುದೀರ್ಘವಾಗಿ ಚರ್ಚೆ ನಡೆಸಲಾಯಿತು.




ಸಹಾಯಕ ಪ್ರಾಧ್ಯಾಪಕರಿಗೆ ಹಾಗೂ ಸಹ ಪ್ರಾಧ್ಯಾಪಕರನ್ನು ಪದೋನ್ನತಿ ಕುರಿತು ನಡೆದ ಚರ್ಚೆಯಲ್ಲಿ ಭಾಗವಹಿಸಿದ ಬಸವರಾಜ ಹೊರಟ್ಟಿ, ಪ್ರಾಧ್ಯಾಪಕರ ಹುದ್ದೆಗೆ ಅರ್ಹತೆ ಪಡೆದು 11 ತಿಂಗಳ ಬಳಿಕ ಸಂದರ್ಶನ ನಡೆಸಿದ್ದರೂ, ಇದುವರೆಗೂ ಮುಂಬಡ್ತಿ ನೀಡಿಲ್ಲ. ಕೂಡಲೇ ಒಂದು ವಾರದೊಳಗಾಗಿ ಸಹಾಯಕ ಹಾಗೂ ಸಹ ಪ್ರಾಧ್ಯಾಪಕರಿಗೆ ಮುಂಬಡ್ತಿ ನೀಡಿ ಪಟ್ಟಿ ಬಿಡುಗಡೆಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

2023 ಡಿಸೆಂಬರ್ 23ರವರೆಗೆ ಆರ್.ಸಿ ಮತ್ತು ಓ.ಸಿ ಕೋರ್ಸ್ ಕಡ್ಡಾಯವಲ್ಲ ಎಂದು ವಿಶ್ವವಿದ್ಯಾಲಯದ ಧನ ಸಹಾಯ ಆಯೋಗ (ಯು.ಜಿ.ಸಿ) ವಿನಾಯಿತಿ ನೀಡಿದ್ದರೂ ಹಲವು ಅಧ್ಯಾಪಕರಿಗೆ ಮುಂಬಡ್ತಿ ನೀಡದೇ ಇರುವ ಬಗ್ಗೆ ಸಭೆಯಲ್ಲಿ ಹಲವು ಸದಸ್ಯರು ತೀವ್ರ ಅಸಮಧಾನ ವ್ಯಕ್ತಿಪಡಿಸಿದರು. ಈ ಸಂದರ್ಭದಲ್ಲಿ ಮಧ್ಯ ಪ್ರವೇಶಿಸಿದ ಸಭಾಪತಿ ಬಸವರಾಜ ಹೊರಟ್ಟಿ, ಇದು ಗಂಭೀರ ವಿಷಯವಾಗಿದ್ದು, ಈ ಬಗ್ಗೆ ಕೂಡಲೇ ಇಲಾಖೆ ಪ್ರಧಾನ ಕಾರ್ಯದರ್ಶಿ ಅಗತ್ಯ ಕ್ರಮ ವಹಿಸಬೇಕು ಎಂದರು.

ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತಾಲಯದಲ್ಲಿಯ ಸಿಬ್ಬಂದಿಗಳ ವರ್ತನೆ, ಭ್ರಷ್ಟಾಚಾರಗಳ ಆರೋಪಗಳ ಬಗ್ಗೆ ಹಲವು ಸದಸ್ಯರುಗಳ ಪ್ರಸ್ತಾಪದ ಹಿನ್ನೆಲೆಯಲ್ಲಿ ಈ ಕುರಿತಂತೆ ಕೂಡಲೇ ಆಂತರಿಕ ತನಿಖೆ ನಡೆಸಬೇಕು. ಆರೋಪ ಇರುವ ಸಿಬ್ಬಂದಿಗಳನ್ನು ತತಕ್ಷಣವೇ ಎತ್ತಂಗಡಿ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ-ಬೋಧಕೇತರ ಹುದ್ದೆಗಳ ಭರ್ತಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ನೇಮಕಾತಿ ಹಾಗೂ ವೇತನ ಸೇರಿದಂತೆ ಇತರೆ ಸಮಸ್ಯೆಗಳ ಕುರಿತು ಕಾಲಮಿತಿಯಲ್ಲಿ ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದ ಬಸವರಾಜ ಹೊರಟ್ಟಿ, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ನೌಕರರು ಮತ್ತು ಸಿಬ್ಬಂದಿಗಳಿಗೆ ವಿಶ್ರಾಂತಿ ವೇತನಕ್ಕೆ ಪೂರ್ಣ ಪ್ರಮಾಣದ ಪಿಂಚಣಿ ಅನುದಾನವನ್ನು ಆದ್ಯತೆ ಮೇರೆಗೆ ಒದಗಿಸುವಂತೆ ಉನ್ನತ ಶಿಕ್ಷಣ ಸಚಿವರನ್ನು ಕೋರಿದರು.

ಶಿಕ್ಷಕ, ಪದವೀಧರ ಕ್ಷೇತ್ರದ ಶಾಸಕರು, ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಆಯುಕ್ತರು ಹಾಗೂ ಉನ್ನತ ಶಿಕ್ಷಣ ಇಲಾಖೆಯ ನಿರ್ದೇಶಕರು ಸೇರಿದಂತೆ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಗದಗ ಜಿಲ್ಲೆಗೆ ಆಗಮಿಸಿದ ಸಂದರ್ಭದಲ್ಲಿ ಗದಗ ನಗರದ ಎಸ್.ಎಸ್.ಕೆ ಶ್ರೀ ಜಗದಂಬಾ ದೇವಸ್ಥಾನ/ಸಮಾಜ ಪಂಚ ಟ್ರಸ್ಟ್ ಕಮಿಟಿಯ ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಗೌರವ ಕಾರ್ಯದರ್ಶಿ ವಿನೋದ ಆರ್.ಶಿದ್ಲಿಂಗ, ಶಾಲಾ ಚೇರಮನ್ ಶ್ರೀನಿವಾಸ ಖಟವಟೆ ಹಾಗೂ ಪದಾಧಿಕಾರಿ ಪರಶುರಾಮ ಬದಿಯವರು ಸಚಿವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ನಿಯಮಗಳನುಸಾರ ಖಾಸಗಿ ಶಾಲೆಗಳಿಗೆ ಅನುದಾನ ನೀಡುವಂತೆ ಮನವಿ ಸಲ್ಲಿಸಿದರು.

## 'ಅಭಿಯಂತರರ ದಿನಾಚರಣೆ' ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಂಜಿನಿಯರಿಂಗ್ ಕ್ಷೇತ್ರದ ಪಿತಾಮಹ ಸರ್ ಎಂ.ವಿಶ್ವೇಶ್ವರಯ್ಯ ಅವರ ಜನ್ಮದಿನದ ಸ್ಮರಣಾರ್ಥವಾಗಿ, ನಗರದ ಸರ್ ಎಂ.ವಿಶ್ವೇಶ್ವರಯ್ಯ ತಾಂತ್ರಿಕ ಕೇಂದ್ರದಲ್ಲಿ ಸೆ. 15ರಂದು ಸಂಜೆ 6ಕ್ಕೆ ಅಭಿಯಂತರರ ದಿನಾಚರಣೆ ಹಾಗೂ ಹೊಸ ಪದಾಧಿಕಾರಿಗಳ ಅಧಿಕಾರ ಹಸ್ತಾಂತರ ಸಮಾರಂಭವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಷನ್ ಅಧ್ಯಕ್ಷ ಬಸವರಾಜ ಮಳ್ಳಣ್ಣವರ ತಿಳಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷ ಸೆ. 15ರಂದು ನಾಡಿನಾದ್ಯಂತ 'ಅಭಿಯಂತರರ ದಿನಾಚರಣೆ'ಯನ್ನು ಆಚರಿಸಲಾಗುತ್ತದೆ. ಈ ಮೂಲಕ ಅಭಿಯಂತರರು ಸರ್ ಎಂ.ವಿಶ್ವೇಶ್ವರಯ್ಯ ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳಲು ಪ್ರೇರೇಪಣೆ ನೀಡಲಾಗುತ್ತಿದೆ. ಅವರ ಸಾರ್ಥಕ ಬದುಕು ನಮಗೆಲ್ಲಾ ಸ್ಪೂರ್ತಿಯಾಗಿದೆ ಎಂದರು.




ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಉದ್ಘಾಟಿಸಲಿದ್ದು, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಧಾರವಾಡ ಎಸ್.ಡಿ.ಎಂ ಇಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕ ಡಾ. ದಿಲೀಪ ಕುಲಕರ್ಣಿ, ಮಹೇಶ ಪಟೇಲ್, ನಾಗರಾಜ ಲಂಗೋಟಿ, ಜಗನ್ನಾಥ ಚಾಗಿ, ಸಿದ್ಧಲಿಂಗಪ್ಪ ಲಕ್ಕುಂಡಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಷನ್‌ನ ನೂತನ ಪದಾಧಿಕಾರಿಗಳಾದ ಅಧ್ಯಕ್ಷ ಬಸವರಾಜ ಮಳ್ಳಣ್ಣವರ, ಕಾರ್ಯದರ್ಶಿ ಐ.ಎಂ. ಕೊಪ್ಪಳ, ಖಜಾಂಚಿ ಬಸವರಾಜ ಶಲವಡಿ, ಎಂ.ಪಿ. ಪಾಟೀಲ, ಎಸ್. ಎಸ್. ಚವಡಿ, ಬಸಪ್ಪ ಚಿವಟಗುಂಡಿ, ರಾಜು ಗುಡಸಾಲಿ, ಮಂಜುನಾಥ ಟಿಕಾರೆ, ಲೋಹಿತ ಶಾವಿ, ವಿರೂಪಾಕ್ಷ ನವಲಗುಂದ, ನರೇಂದ್ರ ಚಿಕ್ಕನಗೌಡ್ರ ಅವರು ಅಧಿಕಾರ ಸ್ವೀಕರಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಲ್ಲಿಕಾರ್ಜುನ ಐಲಿ, ಬಿ.ಆರ್. ಹೊಸಮನಿ, ಎಸ್.ಡಿ. ಪಾಟೀಲ, ಎಂ.ಪಿ. ಪಾಟೀಲ, ವಿ.ಎಚ್. ಡಂಬಳ, ಶಂಕರ ಬಾಕಳೆ, ಬಿ.ಬಿ. ಶಲವಡಿ, ಪ್ರಕಾಶ, ರಾಜು ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಭಕ್ತ ದೇವರಿಗಿಂತಲೂ ಶ್ರೇಷ್ಠ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗುರು-ಲಿಂಗ-ಜಂಗಮ ಈ ಮೂರಕ್ಕೂ ಹೆಚ್ಚಿನ ಮಹತ್ವ ಸಿಗಬೇಕೆಂದರೆ ಅದಕ್ಕೆ ಭಕ್ತನೇ ಮೂಲ ಕಾರಣ. ಭಕ್ತನಿಲ್ಲದೆ ಈ ಮೂರಕ್ಕೂ ಯಾವ ಅರ್ಥವೂ ಇಲ್ಲ ಎಂದು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ನರೇಗಲ್ಲ ಸಮೀಪದ ಅಬ್ಬಿಗೆರೆ ಗ್ರಾಮದ ಹಿರೇಮಠದಲ್ಲಿ ಲಿಂ. ಸೋಮೇಶಖರ ಶಿವಾಚಾರ್ಯರ 5ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ನಡೆದಿರುವ ಪ್ರವಚನದಲ್ಲಿ ಅವರು ಭಕ್ತನ ಕರ್ತವ್ಯ ಕುರಿತು ಪ್ರವಚನ ನೀಡಿದರು. ಭಕ್ತನೆಂದರೆ ಯಾರು ಎಂಬುದನ್ನು ಮೊದಲು ತಿಳಿಯಬೇಕು. ಊದುಬತ್ತಿ ಹಿಡಿದುಕೊಂಡು, ತೆಂಗಿನಕಾಯಿ ತೆಗೆದುಕೊಂಡು, ವಿಭೂತಿ ಬಳಿದುಕೊಂಡು ಗುಡಿಗುಂಡಾರಗಳಿಗೆ ತಿರುಗಾಡುವವ ಭಕ್ತನಲ್ಲ. ನಿಜವಾದ ಭಕ್ತನೆಂದರೆ ಯಾರು ಗುರು-ಲಿಂಗ-ಜಂಗಮನನ್ನು ಮನಸಾರೆ ಸೇವಿಸುತ್ತಾನೆಯೋ ಅವನೇ ನಿಜವಾದ ಭಕ್ತ. ಇಂತಹ ಭಕ್ತರು ನೀವಾಗಬೇಕಾದರೆ ಶರಣರ ಕುರಿತ ಪ್ರವಚನ ಆಲಿಸಿ ಆಧ್ಯಾತ್ಮಿಕ ಕಾರ್ಯಗಳಲ್ಲಿ ತೊಡಗಿಕೊಳ್ಳಬೇಕೆಂದು ತಿಳಿಸಿದರು.

ಭಕ್ತ ದೇವರಿಗಿಂತಲೂ ದೊಡ್ಡವ ಮತ್ತು ಶ್ರೇಷ್ಠ. ಅಂತಹ ಭಕ್ತ ದೇವರಿಗೇ ಸವಾಲು ಹಾಕುವಷ್ಟು ಪ್ರಭಾವಿಯಾಗಿರುತ್ತಾರೆ. ದೇವರೂ ಸಹ ನಂಬಿದ ಭಕ್ತರನ್ನು ಎಂದಿಗೂ ಕೈ ಬಿಡುವುದಿಲ್ಲ. ಅವರು ಹೇಳಿದ ಕೆಲಸಗಳನ್ನೆಲ್ಲ ಮಾಡುತ್ತಾನೆ ಎಂದರು.

ಸೆ. 15ರಂದು ನಡೆಯುವ ಬಾಳೆಹೊನ್ನೂರು ಪೀಠದ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ಭಗವತ್ಪಾದರ ಇಷ್ಟಲಿಂಗಪೂಜೆ ಹಾಗೂ ಧರ್ಮಸಭೆ ಸಮಾರಂಭಕ್ಕೆ ಬನ್ನಿಕಟ್ಟಿ ಓಣಿಯ ಮಹಿಳೆಯರು ರೇಣುಕರ ರೊಟ್ಟಿಬುತ್ತಿ ಪ್ರಸಾದ ತಂದು ತಮ್ಮ ಭಕ್ತಿ ಪ್ರಸಾದವನ್ನು ಮಠಕ್ಕೆ ಸಮರ್ಪಿಸಿದರು. ಬಸವರಾಜ ಹನಮನಾಳ ಹಾಗೂ ಶಿವಾನಂದ ಕಮ್ಮಾರ ಸಂಗೀತ ಸೇವೆ ಸಲ್ಲಿಸಿದರು. ಡಾ. ಆರ್.ಕೆ. ಗಚ್ಚಿನಮಠ, ಚಿತ್ರದುರ್ಗದ ಹಾಸ್ಯ ಸಾಹಿತಿ ಪಿ.ಜಗನ್ನಾಥ್, ಅಬ್ಬಿಗೆರೆ ಗ್ರಾಮದ ಗಣ್ಯರು ಉಪಸ್ಥಿತರಿದ್ದರು. ಅಂದಪ್ಪ ವೀರಾಪೂರ ನಿರ್ವಹಿಸಿದರು.

## ಸೇವಾ ಪಾಕ್ಷಿಕ ಅಭಿಯಾನದ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಗದಗ ನಗರ ಮಂಡಲ ಸೇವಾ ಪಾಕ್ಷಿಕ ಅಭಿಯಾನದ ಉದ್ಘಾಟನೆ ಜರುಗಿತು. ಸಭೆಯ ಅಧ್ಯಕ್ಷತೆಯನ್ನು ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಹಿರಿಯರಾದ ಶ್ರೀಪತಿ ಉಡುಪಿ, ಜಿಲ್ಲಾ ಕಾರ್ಯದರ್ಶಿ ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ನಿರ್ಮಲಾ ಕೊಳ್ಳಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಮಂಡಲ ಪ್ರಧಾನ ಕಾರ್ಯದರ್ಶಿ ಶಂಕರ ಕಾಕಿ, ಸುರೇಶ ಚಿತ್ತರಗಿ, ವಿಜಯಲಕ್ಷ್ಮೀ ಮಾನ್ವಿ, ಶಂಕರ ಕರಿಬಿಷ್ಠಿ, ವಂದನಾ ವರ್ಣೇಕರ, ಮಂಜುನಾಥ ಶಾಂತಗೇರಿ, ಮಂಜುನಾಥ ತಳವಾರ, ರಾಚಯ್ಯ ಹೊಸಮಠ, ಅಪ್ಪಣ್ಣ ಟೆಂಗಿನಕಾಯಿ, ದೇವಿಂದ್ರಪ್ಪ ಹೂಗಾರ, ಜಯಶ್ರೀ ಅಣ್ಣಿಗೇರಿ, ಜಯಶ್ರೀ ಪಾಟೀಲ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ಸುಮಂಗಲಾ ಕೊನೆವಾಲ ಮುಂತಾದವರಿದ್ದರು.




## ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ ತರಬೇತಿ




■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಎಲ್ಲ ಜಿಲ್ಲೆಗಳ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಚುನಾವಣಾ ತಹಸೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು (Dedicated AEROಗಳು), ಶಿರಸ್ತೇದಾರರು, ALMT, DLMT ಹಾಗೂ SLMT ಸದಸ್ಯರು, ಎಲ್ಲಾ ತಾಲೂಕುಗಳ ಚುನಾವಣಾ ವಿಷಯನಿರ್ವಾಹಕರು ಹಾಗೂ ನಾಲ್ಕು ಮತಕ್ಷೇತ್ರಗಳ ಚುನಾವಣಾ ಸಮಾಲೋಚಕರು ಮುಂತಾದವರಿಗೆ ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ (SIR - Special Intensive Revision) ಕುರಿತು ಶನಿವಾರ ತರಬೇತಿ ಏರ್ಪಡಿಸಲಾಗಿತ್ತು.

ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಾದ ವಿ ಅನ್ಬುಕುಮಾರ ಹಾಗೂ ಜಂಟಿ ಚುನಾವಣಾಧಿಕಾರಿ ಯೋಗಿಶ್ವರ ಅವರ ತರಬೇತಿಯ ನೇತೃತ್ವದಲ್ಲಿ ತರಬೇತಿ ನೀಡಲಾಯಿತು.

ಗದಗ ಜಿಲ್ಲೆಯ ಜಿಲ್ಲಾಡಳಿತ ಭವನದ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಜಿಲ್ಲೆಯಿಂದ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಚುನಾವಣಾ ತಹಸೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು (Dedicated AEROಗಳು), ಶಿರಸ್ತೇದಾರರು, ALMT, DLMT ಹಾಗೂ SLMT ಸದಸ್ಯರು, ಎಲ್ಲಾ ತಾಲೂಕುಗಳ ಚುನಾವಣಾ ವಿಷಯನಿರ್ವಾಹಕರು ಹಾಗೂ ನಾಲ್ಕು ಮತಕ್ಷೇತ್ರಗಳ ಚುನಾವಣಾ ಸಮಾಲೋಚಕರು ಪಾಲ್ಗೊಂಡಿದ್ದರು.

## ಪ್ಯಾಲೆಸ್ತೀನ್ ಪರ ವಿಶ್ವ ಸಂಸ್ಥೆ ನಿರ್ಣಯ: ಭಾರತ ಸೇರಿದಂತೆ 142 ರಾಷ್ಟ್ರಗಳ ಬೆಂಬಲ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ಯಾಲೆಸ್ತೀನ್ ಸಮಸ್ಯೆಯನ್ನು ಶಾಂತಿಯುತ ಮಾರ್ಗಗಳ ಮೂಲಕ ಪರಿಹರಿಸುವುದು ಮತ್ತು ದ್ವಿರಾಷ್ಟ್ರ ಪರಿಹಾರವನ್ನು ಮುನ್ನಡೆಸುವ 'ನ್ಯೂಯಾರ್ಕ್ ಘೋಷಣೆ'ಯನ್ನು ಬೆಂಬಲಿಸುವ ನಿರ್ಣಯವನ್ನು ಭಾರತ ಶುಕ್ರವಾರ (ಸೆ.12) ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಬೆಂಬಲಿಸಿದೆ.

ಫ್ರಾನ್ಸ್ ಮಂಡಿಸಿದ ನಿರ್ಣಯದ ಪರವಾಗಿ 142 ಮತಗಳು, ವಿರುದ್ಧ 10 ಮತಗಳು ಬಿದ್ದಿವೆ. 12 ರಾಷ್ಟ್ರಗಳು ಮತದಾನದಿಂದ ದೂರ ಉಳಿದಿವೆ. ಹೆಚ್ಚು ಮತಗಳು ಪರ ಬಿದ್ದಿರುವುದರಿಂದ ನಿರ್ಣಯ ಅಂಗೀಕಾರಗೊಂಡಿದೆ. ಅಮೆರಿಕ, ಇಸ್ರೇಲ್, ಅರ್ಜೆಂಟೀನಾ ಮತ್ತು ಹಂಗೇರಿ ನಿರ್ಣಯ ವಿರೋಧಿಸಿದ ರಾಷ್ಟ್ರಗಳಲ್ಲಿ ಸೇರಿವೆ.

'ಪ್ಯಾಲೆಸ್ತೀನ್ ಸಮಸ್ಯೆಗಳ ಶಾಂತಿಯುತ ಇತ್ಯರ್ಥ ಮತ್ತು ದ್ವಿರಾಷ್ಟ್ರ ಪರಿಹಾರದ ಅನುಷ್ಠಾನದ ಕುರಿತು ನ್ಯೂಯಾರ್ಕ್ ಘೋಷಣೆಯ ಅನುಮೋದನೆ' ಎಂಬ ಔಪಚಾರಿಕ ಶೀರ್ಷಿಕೆಯ ನಿರ್ಣಯವನ್ನು ಜುಲೈನಲ್ಲಿ ಫ್ರಾನ್ಸ್ ಮತ್ತು ಸೌದಿ ಅರೇಬಿಯಾ ಸಹ-ಅಧ್ಯಕ್ಷತೆಯಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ನಡೆದ ಉನ್ನತ ಮಟ್ಟದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಮುನ್ನೆಲೆಗೆ ತರಲಾಗಿತ್ತು.

ನಿರ್ಣಯದ ಪ್ರಕಾರ, ಗಾಝಾದಲ್ಲಿನ ಯುದ್ಧವನ್ನು ಕೊನೆಗೊಳಿಸಲು, ದ್ವಿರಾಷ್ಟ್ರ ಪರಿಹಾರದ ಪರಿಣಾಮಕಾರಿ ಅನುಷ್ಠಾನದ ಆಧಾರದ ಮೇಲೆ ಇಸ್ರೇಲ್-ಪ್ಯಾಲೆಸ್ತೀನ್ ಸಂಘರ್ಷದ ನ್ಯಾಯಯುತ, ಶಾಂತಿಯುತ ಮತ್ತು ಶಾಶ್ವತ ಇತ್ಯರ್ಥವನ್ನು ಸಾಧಿಸಲು ಮತ್ತು ಪ್ಯಾಲೆಸ್ತೀನಿಯರು, ಇಸ್ರೇಲಿಗಳು ಹಾಗೂ ಆ ಪ್ರದೇಶದ ಎಲ್ಲಾ ಜನರಿಗೆ ಉತ್ತಮ ಭವಿಷ್ಯವನ್ನು ನಿರ್ಮಿಸಲು ಸಾಮೂಹಿಕ ಕ್ರಮ ಕೈಗೊಳ್ಳಲು ರಾಷ್ಟ್ರಗಳು ಒಪ್ಪಿಕೊಂಡಿವೆ.

### ಎ.ಎಲ್. ಬಿಜಾಪುರರಿಗೆ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯಿಂದ ಗೌರವ

# 'ರಾಜ್ಯಮಟ್ಟದ ಉತ್ತಮ ಶಿಕ್ಷಕ'

■ವಿಜಯಸಾಕ್ಷಿ ಸುದ್ದಿ, ಡಂಬಳ

ತಮ್ಮ ಪ್ರಾಮಾಣಿಕ ಕಲಿಕಾ ಚಟುವಟಿಕೆಗಳ ಮೂಲಕ 30 ವರ್ಷಗಳ ಕಾಲ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸುತ್ತಿರುವ ಕದಾಂಪುರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಅಬ್ದುಲಮುನಾಫ್ ಬಿಜಾಪುರ ಹೊಳೆಆಲೂರ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಕೊಡಮಾಡುವ 'ರಾಜ್ಯಮಟ್ಟದ ಉತ್ತಮ ಶಿಕ್ಷಕ' ಪ್ರಶಸ್ತಿಗೆ ಭಾಜನರಾಗಿದ್ದಾರೆ.



ಲಾಡಸಾಬ-ಮಹಬೂಬಿ ಅವರು ಅಬ್ದುಲಮುನಾಫ್ ಅವರ ತಂದೆ-ತಾಯಿಗಳು. ಪತ್ನಿ ಶಬಿಯಾಸುತ್ತಾನ ಅವರ ಕೈ ಹಿಡಿದರು. 1995ರಲ್ಲಿ ಹುಲಕೋಟಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ವೃತ್ತಿಜೀವನ ಪ್ರಾರಂಭಿಸಿ 14 ವರ್ಷ, ನಂತರ ರಾಜೀವಗಾಂಧಿ ಪ್ರೌಢಶಾಲೆಯಲ್ಲಿ 11 ವರ್ಷ, ಮುಧೋಳದಲ್ಲಿ, ನಾಗಾವಿ ಗ್ರಾಮದಲ್ಲಿ, ಈಗ ಕದಾಂಪುರ ಗ್ರಾಮದಲ್ಲಿ 3 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ.

ವಿದ್ಯಾರ್ಥಿಗಳ, ಜನತೆಯ ಮೆಚ್ಚಿನ ಶಿಕ್ಷಕರಾದ ಇವರಿಗೆ 2010ರಲ್ಲಿ ಗದಗ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ, ತಾಲೂಕಾ ಉತ್ತಮ ಮಾರ್ಗದರ್ಶಕ ಪ್ರಶಸ್ತಿಗಳು ಸಂದಿವೆ. ಕರ್ನಾಟಕ ರಾಜ್ಯ ಹಿಂದಿ ಭಾಷಾ ಸಂಚಾಲಕರಾಗಿ, ಸಂಪನ್ಮೂಲ ವ್ಯಕ್ತಿಯಾಗಿ, ಗದಗ ಜಿಲ್ಲಾ ಹಿಂದಿ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ, ಹಲವು ಹಿಂದಿ ಕಾರ್ಯಾಗಾರದ ಮೂಲಕ ಸೇವೆ ಸಲ್ಲಿಸಿದ ಇವರ ಕಾರ್ಯಕ್ಕೆ ವಿದ್ಯಾರ್ಥಿಗಳು ಶಿಕ್ಷಕರುಗಳು ಅಪಾರ ಮೆಚ್ಚುಗೆಗೆ ವ್ಯಕ್ತಪಡಿಸಿದ್ದಾರೆ.

ಹಿಂದಿ ಶಿಕ್ಷಣಕ್ಕೆ ಒತ್ತು ನೀಡುವುದರೊಂದಿಗೆ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ನಿರಂತರ ಶ್ರಮಿಸುತ್ತಿರುವ ಫಲವಾಗಿ ಸಾವಿರಾರು ವಿದ್ಯಾರ್ಥಿಗಳು ಉನ್ನತ ಹುದ್ದೆಯನ್ನು ಹೊಂದುವಂತೆ ಮಾಡಿದ ಶ್ರೇಯಸ್ಸು ಇವರದಾಗಿದೆ.

ವಿದ್ಯಾರ್ಥಿಗಳ ಭವಿಷ್ಯದಲ್ಲಿ ದೇಶದ ಭವಿಷ್ಯ ಅಡಗಿದೆ. ಆ ನಿಟ್ಟಿನಲ್ಲಿ ಶ್ರಮಿಸುತ್ತಿರುವ ಎ.ಎಲ್. ಬಿಜಾಪುರ ಅವರು ಹೊಳೆಆಲೂರ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಕೊಡಮಾಡುವ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾಗಿರುವುದು ಪ್ರಶಂಸನೀಯ.

**– ಗಂಗಾಧರ ಅಣ್ಣಿಗೇರಿ.**
ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮುಂಡರಗಿ.

ವಿದ್ಯಾರ್ಥಿಗಳು ಮೊಬೈಲ್ ಗೀಳನ್ನು ಬಿಟ್ಟು ಉತ್ತಮ ಭವಿಷ್ಯ ಹೊಂದಲು, ತಂದೆ-ತಾಯಿ, ಗುರುಗಳ ಮಾರ್ಗದರ್ಶನದಲ್ಲಿ ಸಾಗಿದಾಗ ನಿಮ್ಮ ಭವಿಷ್ಯ ಬೆಳಗುತ್ತದೆ.

**– ಎ.ಎಲ್. ಬಿಜಾಪುರ.**
ಪ್ರಶಸ್ತಿ ಪುರಸ್ಕೃತ ಶಿಕ್ಷಕ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka